EMAIL : dairyadadaari@gmail.com ಸಂಪುಟ: 01 ಸಂಚಿಕೆ: 64
ಬೆಲೆ ರೂ : 2.00
ರಾಯಚೂರು
ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795 ಶುಕ್ರವಾರ: 13-02-2026

## ನಗರದಲ್ಲಿ ಐಪಿಎಲ್ ಪಂದ್ಯ:ಸಚಿವ ಸಂಪುಟದಲ್ಲಿ ನಿರ್ಧಾರ

**ಬೆಂಗಳೂರು, ಫೆ.12:** ನಗರದ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ 2026ರ ಐಪಿಎಲ್ ಪಂದ್ಯಗಳನ್ನು ಆಯೋಜಿಸುವ ಸಂಬಂಧ ಸಚಿವ ಸಂಪುಟದಲ್ಲಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಪರಮೇಶ್ವರ್ ತಿಳಿಸಿದ್ದಾರೆ.ಬೆಂಗಳೂರಿನಲ್ಲಿ ಮಾಧ್ಯಮಗಳಿಗೆ ಈ ಕುರಿತು ಮಾಹಿತಿ ಹಂಚಿಕೊಂಡ ಸಚಿವರು, ಐಪಿಎಲ್ ಪಂದ್ಯಗಳ ಆಯೋಜನೆ ಸಂಬಂಧ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಪದಾಧಿಕಾರಿಗಳು ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪ್ರತಿನಿಧಿಗಳೊಂದಿಗೆ ಸಭೆ ನಡೆಸಲಾಗಿತ್ತು. ನಮ್ಮ ಅಧಿಕಾರಿಗಳು ನಿವೃತ್ತ ನ್ಯಾಯಮೂರ್ತಿ ಕುನ್ಹಾ ಅವರ ವರದಿಯ ಆಧಾರದ ಮೇರೆಗೆ ಅವರ ಶಿಫಾರಸುಗಳನ್ನು ತಿಳಿಸಲಾಗಿತ್ತು. ಭವಿಷ್ಯದಲ್ಲಿ ಐಪಿಎಲ್ ಅಥವಾ ಅಂತಾರಾಷ್ಟ್ರೀಯ ಪಂದ್ಯಗಳನ್ನು ಆಯೋಜಿಸಬೇಕಾದರೆ, ಕುನ್ಹಾ ಅವರ ಶಿಫಾರಸುಗಳನ್ನು ಪಾಲಿಸಬೇಕು ಎಂದು ಸೂಚಿಸಲಾಗಿತ್ತು. ಇದಕ್ಕೆ ಅನುಗುಣವಾಗಿ ಕೆಎಸ್ ಸಿಎ ಈಗಾಗಲೇ ಕೆಲಸಗಳನ್ನು ಪ್ರಾರಂಭಿಸಿದ್ದಾರೆ. ಅಲ್ಪಾವಧಿ ಸಲಹೆಗಳನ್ನು ಪೂರೈಸಿದ್ದಾರೆ.ಹಿಂದಿನ ಐಪಿಎಲ್ ಚಾಂಪಿಯನ್ ತಂಡದ ತವರು ನೆಲದಲ್ಲಿ ಮರು ವರ್ಷವನ್ನು ಆರಂಭಿಸುವುದು ವಾಡಿಕೆ. ಆ ಪ್ರಕಾರ ಬೆಂಗಳೂರಿನಲ್ಲಿ ಈ ಬಾರಿ ಐಪಿಎಲ್ ಉದ್ಘಾಟನಾ ಪಂದ್ಯ ಆಯೋಜನೆಗೆ ಆರ್ ಸಿಬಿ ಮತ್ತು ಕೆಎಸ್ ಸಿಎ ಮನವಿ ಮಾಡಿವೆ.ಈ ಸಂಬಂಧ ಜಿಬಿಎ ಅಧ್ಯಕ್ಷರು ಹಾಗೂ ಪೊಲೀಸ್ ಆಯುಕ್ತಕರ ಹಾಗೂ ವಿವಿಧ ಇಲಾಖೆಗಳ ಸಮ್ಮುಖದಲ್ಲಿ ಸರ್ಕಾರ ಒಂದು ಸಮಿತಿ ರಚಿಸಿತ್ತು. ಈ ಸಮಿತಿ ವರದಿ ಸಲ್ಲಿಸಿದೆ.ಇದರ ಸಾಧಕ –ಬಾಧಕಗಳ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚಿಸಲಿದ್ದೇವೆ. ನಂತರ ಅಂತಿಮ ನಿರ್ಧಾರವನ್ನು ಘೋಷಿಸಲಿದ್ದೇವೆ ಎಂದು ಹೇಳಿದರು.ಮಾರ್ಚ್ ಮೂರನೇ ವಾರದಲ್ಲಿ ಐಪಿಎಲ್ ಆರಂಭವಾಗಲಿರುವ ಕಾರಣ ಬೆಂಗಳೂರಿನಲ್ಲಿ ಐಪಿಎಲ್ ಆಯೋಜನೆ ಕುರಿತು ಅಂತಿಮ ನಿರ್ಧಾರ ಹೊರಬೀಳುವ ಸಾಧ್ಯತೆ ಇದೆ.

# ಕಾಂಗ್ರೆಸ್ ಆಡಳಿತದಲ್ಲಿ ಎಲ್ಲಾ ಇಲಾಖೆಗಳಲ್ಲೂ ಮಿತಿ ಮೀರಿದ ಭ್ರಷ್ಟಾಚಾರ : ವಿಜಯೇಂದ್ರ

**ಬೆಳಗಾವಿ,ಫೆ.12–** ಆಡಳಿತಾರೂಢ ಕಾಂಗ್ರೆಸ್ ಸರಕಾರ ಎಲ್ಲಾ ಇಲಾಖೆಗಳಲ್ಲೂ ಮಿತಿ ಮೀರಿದ ಭ್ರಷ್ಟಾಚಾರವನ್ನು ನಡೆಸುತ್ತಿದ್ದು, ಈ ಸರ್ಕಾರ ಭ್ರಷ್ಟಾಚಾರಕ್ಕೆ ಸೀಮಿತವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು ಸುಮಾರು ಮೂರು ವರ್ಷಗಳಾಗುತ್ತಿದ ಕಳೆದ ಎರಡೂವರೆ–ಮೂರು ವರ್ಷದಲ್ಲಿ ಇವರ ಆಡಳಿತ ವೈಖರಿ, ಇವರ ಯೋಗ್ಯತೆಗೆ ಯಾವುದೇ ಒಂದು ಅಭಿವೃದ್ಧಿ ಕಾರ್ಯ ಮಾಡಲು ಸಾಧ್ಯವಾಗಿಲ್ಲ ಎಂದು ಟೀಕಿಸಿದರು.
ರಾಜ್ಯದಲ್ಲಿರುವ ಬಡವರು, ರೈತರು, ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳು– ಈ ಎಲ್ಲ ಸಮುದಾಯಗಳಲ್ಲಿ ಕಾಂಗ್ರೆಸ್ಸಿಗರ ಮಾತು ನಂಬಿ ನಾವು ಮೋಸ ಹೋಗಿದ್ದೇವೆ; ನಮಗೆ ಅನ್ಯಾಯವಾಗುತ್ತಿದೆ ಎಂಬ ಚರ್ಚೆ ರಾಜ್ಯದೆಲ್ಲೆಡೆ ಆರಂಭವಾಗಿದೆ ಎಂದು ತಿಳಿಸಿದರು.

ಅಹಿಂದ ಹೆಸರು ಹೇಳಿಕೊಂಡು ರಾಜ್ಯದ ಚುಕ್ಕಾಣಿ ಹಿಡಿದ ಸಿದ್ದರಾಮಯ್ಯನವರ ನೇತೃತ್ವದ ಈ ಕಾಂಗ್ರೆಸ್ ಸರಕಾರವು ಪಕ್ಕಕ್ಕಿಟ್ಟು ಹಿಂದುಳಿದ ಸಮುದಾಯಗಳು, ಪರಿಶಿಷ್ಟ ಜಾತಿ ಪಂಗಡಗಳನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಿದ್ದಾರೆ ಎಂಬುದರಲ್ಲಿ ಯಾವುದೇ ಅನುಮಾನಗಳಿಲ್ಲ ಎಂದು ಟೀಕಿಸಿದರು.



ಅಹಿಂದ ಎಂದು ಹೇಳಿಕೊಂಡು ಅಲ್ಪಸಂಖ್ಯಾತರ ಓಲೈಕೆ ರಾಜಕಾರಣ ಮಾಡುತ್ತಿದ್ದಾರೆಯೇ? ಮುಖ್ಯಮಂತ್ರಿಗಳು ಪರಿಶಿಷ್ಟ ಜಾತಿ, ಪಂಗಡಗಳು ಸೇರಿ ಎಲ್ಲ ಸಮುದಾಯಗಳನ್ನು ನಿರ್ಲಕ್ಷ್ಯ ಮಾಡಿದ್ದಾರೆ ಎಂಬುದು ಮೇಲ್ನೋಟಕ್ಕೆ ಗೊತ್ತಾಗುತ್ತದೆ ಎಂದು ವಿವರಿಸಿದರು.ಸರಕಾರವು ಮೊನ್ನೆ ಹೊಸ ಆದೇಶ ಹೊರಡಿಸಿದೆ. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಲ್ಲಿ ಅಲ್ಪಸಂಖ್ಯಾತ ಬಂಧುಗಳಿಗೆ ಒನ್ ಟೈಮ್ ಸೆಟಲ್‌ಮೆಂಟ್ ಸ್ಕಿಮ್ ಅಡಿ ಶೇ.100 ಬಡ್ಡಿ ಮನ್ನಾ ಮಾಡಿದ್ದಾರೆ. ಅವರು ಸಾಲದ ಮೊತ್ತ ಮಾತ್ರ ಕಟ್ಟಿದರೆ ಸಾಕು. ಹಾಗಿದ್ದರೆ ಬೇರೆ ಸಮುದಾಯಗಳು ನಿಮಗೆ ಏನು ಅನ್ಯಾಯ ಮಾಡಿವೆ? ಎಂದು ಪ್ರಶ್ನಿಸಿದರು.
ಸರಕಾರ, ಮುಖ್ಯಮಂತ್ರಿಗಳಿಗೆ ಪರಿಶಿಷ್ಟ ಜಾತಿ, ಪಂಗಡಗಳು, ಹಿಂದುಳಿದ ವರ್ಗಗಳು ಯಾಕೆ ಕಣ್ಣಿಗೆ ಕಾಣುತ್ತಿಲ್ಲ? ಅವರಲ್ಲೂ ಬಡವರಿಲ್ಲವೇ? ಕಾಂಗ್ರೆಸ್ ಸರಕಾರಕ್ಕೆ ಅವರಲ್ಲಿ ಬಡವರಿರುವುದು ಕಣ್ಣಿಗೆ ಕಾಣುತ್ತಿಲ್ಲವೇ? ಎಂದು ಪ್ರಶ್ನೆ ಮುಂದಿಟ್ಟರು.ಅಲ್ಪಸಂಖ್ಯಾತರ ಓಲೈಕೆಗಾಗಿ ಯಾವ ಮಟ್ಟಕ್ಕೂ ಹೋಗುವುದಾದರೆ, ಎಲ್ಲೋ? ಒಂದು ಕಡೆ ಈ ಕಾಂಗ್ರೆಸ್ ಸರಕಾರವು ಈ ಎಲ್ಲ ಸಮುದಾಯಗಳಿಗೆ ಘೋರ ಅನ್ಯಾಯವನ್ನು ಮಾಡುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ನುಡಿದಂತೆ ನಡೆದ, ನುಡಿದಂತೆ ನಡೆಯುವ ಸರಕಾರ ಎಂಬುದನ್ನು ಕೇಳಿಕೇಳಿ ರಾಜ್ಯದ ಜನರ ಕಿವಿ ಚಿಟ್ಟು ಹಿಡಿದಿದೆ. ನುಡಿದಂತೆ ನಡೆಯುತ್ತಿರುವ ಸರಕಾರದ ಯೋಗ್ಯತೆಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಹಾಸ್ಟೆಲ್ ಸೀಟ್ ಕೊಡಲಾಗುತ್ತಿಲ್ಲ. ಹಿಂದುಳಿದ ವರ್ಗಗಳ 1.41 ಲಕ್ಷ ಬಡ ವಿದ್ಯಾರ್ಥಿಗಳಿಗೆ ಹಾಸ್ಟೆಲ್‌ಗೆ ಪ್ರವೇಶ ಸಿಗುತ್ತಿಲ್ಲ ಎಂದು ಪತ್ರಿಕಾ ತುಣುಕನ್ನು ಪ್ರದರ್ಶಿಸಿ ಗಮನ ಸೆಳೆದರು. ಸ್ವತಃ ಸಚಿವರೂ ಇದನ್ನು ಒಪ್ಪಿಕೊಂಡಿದ್ದಾರೆ.
ಯಾವ ಮುಖ್ಯಮಂತ್ರಿಗಳ ಬಗ್ಗೆ ಹಿಂದುಳಿದ ಸಮುದಾಯಗಳು ಸಾಕಷ್ಟು ವಿಶ್ವಾಸ ಇಟ್ಟುಕೊಂಡಿದ್ದವೋ, ಅಹಿಂದ ಹೆಸರು ಹೇಳಿಕೊಂಡು ಮುಖ್ಯಮಂತ್ರಿಗಳಾಗಿ ಆ ಸಮುದಾಯಗಳಿಗೆ ಯಾವ ರೀತಿ ನ್ಯಾಯ ಕೊಡುತ್ತಿದ್ದಾರೆ ಎಂಬುದಕ್ಕೆ ಇದೊಂದು ತಾಜಾ ಉದಾಹರಣೆ ಎಂದು ಟೀಕಿಸಿದರು. ಹಿಂದುಳಿದ ವರ್ಗಗಳ ಬಗ್ಗೆ ಮೊಸಳೆ ಕಣ್ಣೀರು 2ನೇಪುಟಕ್ಕೆ

## ಖಬರ್ಸ್ಥಾನ್ ತಡೆಗೋಡೆ ಕಾಮಗಾರಿ ವಿಳಂಬ: ಅಧಿಕಾರಿಗಳ ವಿರುದ್ಧ ಮುಸ್ಲಿಂ ಮುಖಂಡ ಎಂ.ಡಿ. ಹುಸೇನ್ ಆಕ್ರೋಶ

ಧೈರ್ಯದ ದಾರಿ



**ಸಿರವಾರ,ಫೆ.12–** ಪಟ್ಟಣದ ಫಿರ್ದೋಸ್ ಖಬರ್ಸ್ಥಾನ್‌ಗೆ ತಡೆಗೋಡೆ ನಿರ್ಮಾಣ ಮಾಡಲು ಪಟ್ಟಣ ಪಂಚಾಯಿತಿಯಲ್ಲಿ ಅಗತ್ಯ ಅನುದಾನ ಲಭ್ಯವಿದ್ದರೂ, ಅಧಿಕಾರಿಗಳ ವಿಳಂಬ ನೀತಿಯಿಂದಾಗಿ ಕಾಮಗಾರಿ ಕುಂಠಿತಗೊಂಡಿದೆ ಎಂದು ಮುಸ್ಲಿಂ ಮುಖಂಡರಾದ ಎಂ.ಡಿ. ಹುಸೇನ್ ತೀವ್ರ ಅಸಮಾ ಧಾನ ವ್ಯಕ್ತಪಡಿಸಿದ್ದಾರೆ.

**ಅಧಿಕಾರಿಗಳ ಹಾರಿಕೆ ಉತ್ತರಕ್ಕೆ ಆಕ್ರೋಶ:** ಮಾಧ್ಯಮಗಳೊಂದಿಗೆ ಮಾತನಾಡಿದ ಎಂ.ಡಿ. ಹುಸೇನ್, "ಈ ಯೋಜನೆಯ ಬಗ್ಗೆ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಯೋಜನಾ ನಿರ್ದೇಶಕರಿಗೆ ಪೂರ್ಣ ಮಾಹಿತಿಯಿದೆ.

ಆದರೂ ಸ್ಥಳೀಯ ಅಧಿಕಾರಿಗಳು ಒಬ್ಬರ ಮೇಲೊಬ್ಬರು ಜವಾಬ್ದಾರಿ ತಳ್ಳುತ್ತಿದ್ದಾರೆ. ವಕ್ಫ್ ಅಧಿಕಾರಿಗಳಿಂದ ಆದೇಶ ಬಂದಿಲ್ಲ ಎಂದು ಪಟ್ಟಣ ಪಂಚಾಯಿತಿ ಎಇ ಹೇಳುತ್ತಿದ್ದರೆ, ಪಂಚಾಯಿತಿಯಿಂದ ಯಾವುದೇ ಸೂಚನೆ ಇಲ್ಲ ಎಂದು ವಕ್ಫ್ ಅಧಿಕಾರಿಗಳು ಹೇಳುತ್ತಿದ್ದಾರೆ. ಇವರ ಈ ಹಾರಿಕೆ ಉತ್ತರಗಳಿಂದಾಗಿ ಕಾಮಗಾರಿ ನೆನೆಗುದಿಗೆ ಬಿದ್ದಿದೆ," ಎಂದು ದೂರಿದರು.

**ಜಿಲ್ಲಾಧಿಕಾರಿಗಳ ಭೇಟಿಗೆ ಸಿದ್ಧತೆ:** ಕಾಮಗಾರಿ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ಎಂ.ಡಿ. ಹುಸೇನ್ ಅವರು ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದ್ದಾರೆ. "ಕೂಡಲೇ ತಡೆಗೋಡೆ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸದಿದ್ದಲ್ಲಿ, ಮುಸ್ಲಿಂ ಸಮಾಜದ ಮುಖಂಡರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳೊಂದಿಗೆ ತೆರಳಿ ಮತ್ತೊಮ್ಮೆ ಮಾನ್ಯ ಜಿಲ್ಲಾಧಿಕಾರಿಗಳಿಗೆ ದೂರು ಮತ್ತು ಮನವಿ ಸಲ್ಲಿಸಲಾಗುವುದು," ಎಂದು ತಿಳಿಸಿದರು.

**ಅನುದಾನ ವಾಪಸ್ ಹೋಗುವ ಭೀತಿ:** "ಅನುದಾನವಿದ್ದರೂ ಕೆಲಸ ಮಾಡದೆ ಅಧಿಕಾರಿಗಳು ಕಾಲಹರಣ ಮಾಡುತ್ತಿದ್ದಾರೆ. ಇದು ಹೀಗೆ ಮುಂದುವರೆದರೆ ಹಣ ವಾಪಸ್ ಹೋಗುವ ಸಾಧ್ಯತೆಯಿದೆ. ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು ಸಮನ್ವಯದೊಂದಿಗೆ ಕೆಲಸ ಆರಂಭಿಸಬೇಕು. ಇಲ್ಲದಿದ್ದರೆ ಪಟ್ಟಣ ಪಂಚಾಯಿತಿಗೆ ಮುತ್ತಿಗೆ ಹಾಕುವುದು ಅನಿವಾರ್ಯವಾಗುತ್ತದೆ," ಎಂದು ಅವರು ಎಚ್ಚರಿಸಿದ್ದಾರೆ.

## ಬಸ್ ನಿಲ್ದಾಣಕ್ಕೆ ನೂತನ ಪಟ್ಟಣ ಪಂಚಾಯತ್ ಅಧ್ಯಕ್ಷ ಹಾಜಿ ಚೌದರಿ ಭೇಟಿ: ಸ್ವಚ್ಛತೆಗೆ ಆದ್ಯತೆ, ಡಿಪೋ ಮ್ಯಾನೇಜರ್‌ಗೆ ಸೂಚನೆ

ಧೈರ್ಯದ ದಾರಿ



**ಸಿರವಾರ,ಫೆ.12–**ನೂತನವಾಗಿ ಆಯ್ಕೆಯಾದ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಹಾಜಿ ಚೌದರಿ ಅವರು ಇಂದು ಸ್ಥಳೀಯ ಬಸ್ ನಿಲ್ದಾಣಕ್ಕೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾರ್ವಜನಿಕರ ದೂರುಗಳು ಹಾಗೂ ನಿಲ್ದಾಣದ ಸೌಕರ್ಯಗಳ ಕುರಿತು ಮಾಹಿತಿ ಪಡೆಯಲು ಅವರು ಈ ಭೇಟಿ ನೀಡಿದ್ದರು.

**ತ್ಯಾಜ್ಯ ವಿಲೇವಾರಿಗೆ ಸೂಚನೆ:** ಬಸ್ ನಿಲ್ದಾಣದ ಆವರಣದಲ್ಲಿ ಅಂಗಡಿ ಮುಂಗಟ್ಟುಗಳಿಂದ ಹೊರಬರುವ ಕಸದ ವಿಲೇವಾರಿಯ ಬಗ್ಗೆ ಅಧ್ಯಕ್ಷರು ಕಳವಳ ವ್ಯಕ್ತಪಡಿಸಿದರು. ಬಸ್ ನಿಲ್ದಾಣದ ಒಳಗಿರುವ ಎಲ್ಲಾ ಅಂಗಡಿಗಳ ಕಸವನ್ನು ಸಮರ್ಪಕವಾಗಿ ಸಂಗ್ರಹಿಸಿ, ಕಡ್ಡಾಯವಾಗಿ ಪಟ್ಟಣ ಪಂಚಾಯತ್ ತ್ಯಾಜ್ಯ ಸಂಗ್ರಹಣಾ ವಾಹನಕ್ಕೆ ನೀಡುವಂತೆ ಡಿಪೋ ಮ್ಯಾನೇಜ ರ್ತ್ಯಾಜ್ಯ ಸಂಗ್ರಹಣಾ ವಾಹನಕ್ಕೆ ನೀಡುವಂತೆ ಡಿಪೋ ಮ್ಯಾನೇಜರ್ ಅವರಿಗೆ ಖಡಕ್ ಸೂಚನೆ ನೀಡಿದರು.

**ಸ್ವಚ್ಛತಾ ಅಭಿಯಾನ:** ಡಿಪೋ ಸುತ್ತಮುತ್ತ ದೀರ್ಘಕಾಲದಿಂದ ಬಿದ್ದಿದ್ದ ಕಸದ ರಾಶಿಯನ್ನು ಅಧ್ಯಕ್ಷರ ಸಮ್ಮುಖದಲ್ಲೇ ಪಟ್ಟಣ ಪಂಚಾಯತ್ ಸಿಬ್ಬಂದಿಗಳ ಸಹಾಯದಿಂದ ತೆರವುಗೊಳಿಸಲಾಯಿತು. ನಿಲ್ದಾಣದ ಆವರಣವನ್ನು ಸದಾ ಕಾಲ ಸ್ವಚ್ಛವಾಗಿಡುವಂತೆ ಅಧಿಕಾರಿಗಳಿಗೆ ಅವರು ತಾಕೀತು ಮಾಡಿದರು.

**ಸಾರ್ವಜನಿಕ ಹಿತಾಸಕ್ತಿ:** ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗದಂತೆ ನಿಲ್ದಾಣದ ಪರಿಸರವನ್ನು ನಿರ್ವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಅಧ್ಯಕ್ಷ ಹಾಜಿ ಚೌದರಿ ತಿಳಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಅಧಿಕಾರಿಗಳು, ಡಿಪೋ ಮ್ಯಾನೇಜರ್ ಹಾಗೂ ಸ್ಥಳೀಯ ಪ್ರಮುಖರು ಉಪಸ್ಥಿತರಿದ್ದರು. ಅಧ್ಯಕ್ಷರ ಈ ಕ್ರಮಕ್ಕೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.

## ನಿವೇಶನ ರಹಿತರಿಗೆ ಒಂದು ವರ್ಷದಲ್ಲಿ 1 ಲಕ್ಷ ನಿವೇಶನ ಹಂಚಿಕೆ ಮಾಡುವ ಗುರಿ: ಜಮೀರ್ ಅಹ್ಮದ್



**ಹೊಸಪೇಟೆ ಫೆ12:** ರಾಜ್ಯದಲ್ಲಿ ನಿವೇಶನ ರಹಿತರಿಗೆ ಮುಂದಿನ ಒಂದು ವರ್ಷದಲ್ಲಿ ಸರ್ಕಾರದಿಂದಲೇ ಲೇ–ಔಟ್ ನಿರ್ಮಿಸಿ ನಿವೇಶನ ನೀಡುವ ಗುರಿ ಹೊಂದಲಾಗಿದೆ ಎಂದು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಹೇಳಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪ್ರಸಕ್ತ ಸಾಲಿನ ಜಿಲ್ಲಾ ಯೋಜನಾ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು 2021 ರ ಸಮೀಕ್ಷೆಯ ಪ್ರಕಾರ ರಾಜ್ಯದಲ್ಲಿ 36 ಲಕ್ಷ ಜನರು ನಿವೇಶನ ರಹಿತರಿದ್ದಾರೆ. ಅಂತಹ ಅರ್ಹ ಫಲಾನುಭವಿಗಳಿಗೆ ಸರ್ಕಾರಿ ಸ್ವಾಮ್ಯದ ಜಾಗ ಅಥವಾ ಖಾಸಗಿ ವ್ಯಕ್ತಿಗಳಿಂದ ಖರೀದಿಸಿ ಬಡಾವಣೆ ನಿರ್ಮಿಸಿ ನಿವೇಶ ನೀಡಲಾಗುವದು. ರಾಜೀವ್ ಗಾಂಧಿ ಹೌಸಿಂಗ್ ನಿಗಮದ ಹೆಸರಿನಲ್ಲಿ 24 ಸಾವಿರ ಎಕರೆ ಜಮೀನಿದ್ದು ಇದರಲ್ಲಿ ಬಡಾವಣೆ ನಿರ್ಮಿಸಿ ಹಂತ ಹಂತವಾಗಿ ನಿವೇಶನ ರಹಿತರಿಗೆ ನಿವೇಶನಗಳನ್ನು ರಚನೆ ಮಾಡಿ ವಿತರಣೆ ಮಾಡುವ ಉದ್ದೇಶ ಹೊಂದಲಾಗಿದೆ.
ಹೊಸಪೇಟೆ ನಗರಸಭೆ ವ್ಯಾಪ್ತಿಯಲ್ಲಿ ಒಟ್ಟು 60 ಕೊಳಚೆ ಪ್ರದೇಶಗಳಿದ್ದು. ಈ ಪೈಕಿ 35 ಸರ್ಕಾರದ ಜಾಗ ಹಾಗೂ 25 ಖಾಸಗಿಯಾಗಿವೆ. ಸರ್ಕಾರಿ ಸ್ವಾಮ್ಯದಲ್ಲಿನ 35 ಕೊಳಚೆ ಪ್ರದೇಶದ ಎಲ್ಲಾ ನಿವಾಸಿಗಳಿಗೂ ಒಂದು ತಿಂಗಳ ಒಳಗಾಗಿ ಇ–ಖಾತಾ ನೀಡಬೇಕು. ತಪ್ಪಿದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಲಾಗುವುದು ಎಂದು ಕಡಕ್ ಸೂಚನೆ ನೀಡಿದರು.ಜಿಲ್ಲೆಯ 6 ತಾಲ್ಲೂಕಿಗೆ ಗ್ರಾಮೀಣ ವಸತಿ ಯೋಜನೆಯಡಿ ಮುಂದಿನ ಐದು ವರ್ಷದಲ್ಲಿ 58917 ಮನೆ ನಿರ್ಮಾಣಕ್ಕೆ ಭೌತಿಕ ಗುರಿ ಹೊಂದಲಾಗಿದೆ. ಇದಕ್ಕಾಗಿ ರೂ.6048 ಕೋಟಿ ಅಂದಾಜು ಮಾಡಲಾಗಿದೆ. ಇದರಲ್ಲಿ ಬರುವ ವರ್ಷ 11782 ಮನೆಗಳ ನಿರ್ಮಾಣಕ್ಕೆ ರೂ.191 ಕೋಟಿ ವೆಚ್ಚದ ಅಂದಾಜು ಮಾಡಲಾಗಿದೆ ಎಂದು ಮಾಹಿತಿ ನೀಡಿದರು.
ಈ ವೇಳೆ ಸದಸ್ಯರೊಬ್ಬರು ಮಾತನಾಡಿ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನಲ್ಲಿ ಸಾಕಷ್ಟು ಮೂಲಭೂತ ಸೌಕರ್ಯಗಳ ಕೊರತೆ ಇದೆ. ಆದ್ದರಿಂದ ತಾಲ್ಲೂಕು ಮಟ್ಟದ ಸಭೆ ಆಯೋಜಿಸಿದಲ್ಲಿ ಸದಸ್ಯರು ತಮ್ಮ ವ್ಯಾಪ್ತಿಯ ಸಮಸ್ಯೆಗಳು ಹೇಳಿಕೊಳ್ಳಲು ಸಹಕಾರ ನೀಡಿದಂತಾಗುತ್ತದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಉಸ್ತುವಾರಿ ಸಚಿವರು ಸಕರಾತ್ಮಕವಾಗಿ ಸ್ಪಂದಿಸಿದರು. ಸಭೆಯಲ್ಲಿ ಶಾಸಕರಾದ ಡಾ.ಎನ್.ಟಿ.ಶ್ರೀನಿವಾಸ್, ಎಂ.ಪಿ.ಲತಾ ಮಲ್ಲಿಕಾರ್ಜುನ, ಕೃಷ್ಣನಾಯ್ಕ, ನಗರಸಭೆ ಅಧ್ಯಕ್ಷ ಎನ್.ರೂಪೇಶ್ ಕುಮಾರ್, ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ, ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮೊಹ್ಮದ್ ಅಲಿ ಅಕ್ರಂ ಷಾ, ಅರಣ್ಯ ಇಲಾಖೆ ಉಪ ಸಂರಕ್ಷಣಾಧಿಕಾರಿ ಅನುಪಮ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿದ್ದರು.

## ರಾಯಚೂರು ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನೆ ನಡೆಸಿದ ಪ್ರಾದೇಶಿಕ ಆಯುಕ್ತರು

ಧೈರ್ಯದ ದಾರಿ



**ರಾಯಚೂರು,ಫೆ.12–** ರಾಯಚೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಗಳು ಆಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಫೆ11ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ರಾಯಚೂರು ಮಹಾನಗರ ಪಾಲಿಕೆಯ ಪ್ರಗತಿ ಪರಿಶೀಲನೆ ನಡೆಸಿದರು.

ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಈಗಿನ ಮಹಾನಗರ ಪಾಲಿಕೆಯ ಕಚೇರಿಯ ಕೋರ್ಟ ಹಾಲನಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಆಯುಕ್ತರು, ರಾಯಚೂರು ಸಿಟಿ ಜನತೆಗೆ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಸೇರಿದಂತೆ ಯಾವುದೇ ರೀತಿಯ ಮೂಲಭೂತ ಸೌಕರ್ಯ ಕಾರ್ಯವು ಇನ್ಮುಂದೆ ಸಹ ಅಚ್ಚುಕಟ್ಟಾಗಿ ನಡೆಯಬೇಕು ಎಂದು ಸೂಚನೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆಯಿಂದ ಸಿಟಿಯಲ್ಲಿ ಈಗ ನಡೆಯುತ್ತಿರುವ ಸ್ವಚ್ಛತಾ ಕಾರ್ಯಗಳು ಮತ್ತು ನಗರ ಸೌಂದರ್ಯೀಕರಣ ಕಾರ್ಯಗಳನ್ನು ಯಥಾವತ್ತು ಮುಂದುವರೆಸಬೇಕು. ಸುಗಮ ಸಂಚಾರಕ್ಕೆ ತೊಂದರೆಯಾಗದ ರೀತಿಯಲ್ಲಿ ಸಿಟಿಯಲ್ಲಿನ ಎಲ್ಲ ಕಡೆಗೆ ರಸ್ತೆ ಬದಿಗಳಲ್ಲಿ ಸಸಿಗಳನ್ನು ನೆಡುವ ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು.

ರಾಯಚೂರು ಸಿಟಿಯಲ್ಲಿ ಒಟ್ಟು 35 ವಾರ್ಡ ಗಳಿದ್ದು, ಕೃಷ್ಣಾ

ಮತ್ತು ತುಂಗಭದ್ರಾ ನದಿಗಳು ನಗರದಿಂದ 20 ರಿಂದ 30 ಕಿ.ಮೀ ದೂರದಲ್ಲಿವೆ. ಕೃಷ್ಣ ನದಿಯಿಂದ ಶೇ.80ರಷ್ಟು ಮತ್ತು ತುಂಗಭದ್ರಾ ನದಿಯಿಂದ ಶೇ.20 ಪ್ರಮಾಣದಷ್ಟು ನೀರು ಪಡೆಯಲಾಗುತ್ತಿದೆ. ಚಿಕ್ಕಸೂಗೂರನಲ್ಲಿನ ಕುಡಿಯುವ ನೀರು ಶುದ್ಧೀಕರಣ ಘಟಕ ಮತ್ತು ರಾಂಪೂರ ಬಳಿಯಲ್ಲಿನ ಕುಡಿಯುವ ನೀರು ಶುದ್ಧೀಕರಣ ಘಟಕದ ಮೂಲಕ ನದಿ ನೀರನ್ನು ಶುದ್ಧೀಕರಣಗೊಳಿಸಿ ನಗರಕ್ಕೆ ನೀರು ಪೂರೈಸಲಾಗುತ್ತಿದೆ.

ರಾಯಚೂರು ಸಿಟಿಯಲ್ಲಿ ಒಟ್ಟು 650 ಕಿ.ಮೀ ರಸ್ತೆ ಜಾಲದ ವ್ಯವಸ್ಥೆಯಿದೆ. ಇತ್ತೀಚಿನ ಒಳಚರಂಡಿ ಜಾಲದ ಉದ್ದ 300 ಕಿ.ಮೀ ಇರುತ್ತದೆ. 73,000 ಮನೆಗಳು ಇರುತ್ತವೆ. ಸಿಟಿಯಲ್ಲಿ ಇದುವರೆಗೆ 431 ಕಿ.ಮೀ ನಷ್ಟು ಒಳಚರಂಡಿ ಜಾಲದ ವ್ಯವಸ್ಥೆ ಇದ್ದು ಈ ಪೈಕಿ 300 ಕಿ.ಮೀ ಜಾಲ ಕಾರ್ಯನಿರ್ವಹಿಸುತ್ತಿದೆ ಎಂದು ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸಭೆಗೆ ವಿವರಿಸಿದರು.

ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಗರವನ್ನು ಸೌಂದರ್ಯೀಕರಣಗೊಳಿಸಲು ಬೇಸಿಗೆ ಕಾಲದಲ್ಲಿ ತಾಪಮಾನವನ್ನು ನಿಯಂತ್ರಿಸಿ ಪರಿಸರದ ಸಮತೋಲನವನ್ನು ವಾಯು ಗುಣಮಟ್ಟವನ್ನು ಹೆಚ್ಚಿಸಲು ಹಾಗೂ ವಿಶೇಷವಾಗಿ ವಾಯುಮಾಲಿನ್ಯ ನಿಯಂತ್ರಿಸಿ ನಗರವನ್ನು ಪರಿಸರ ಸ್ನೇಹಿ ನಗರವನ್ನಾಗಿ ರೂಪಿಸಲು ಹೆಚ್ಚಿನ ಸಂಖ್ಯೆಯಲ್ಲಿ ಗಿಡಮರ ನೆಡುವುದು ಅವಶ್ಯವಿರುವ ಕಾರಣ 99.99 ಲಕ್ಷ ರೂ ವೆಚ್ಚದಲ್ಲಿ ಕಾಮಗಾರಿ ನಿರ್ವಹಿಸಲು ಅಂದಾಜು ಪತ್ರಿಕೆಯನ್ನು ಸಿದ್ಧಪಡಿಸಿದ್ದು ಆಡಳಿತಾತ್ಮಕ ಅನುಮೋದನೆ ಪಡೆದು ಕಾರ್ಯಗತಗೊಳಿಸಲಾಗುವುದು ಎಂದು ಇದೆ ವೇಳೆ ಪಾಲಿಕೆಯ ಆಯುಕ್ತರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಶರಣಪ್ಪ ಸತ್ಯಂಪೇಟೆ, ಸಂತೋಷ ರಾಣಿ ಸೇರಿದಂತೆ ಪಾಲಿಕೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

# ಕಾಂಗ್ರೆಸ್ ಆಡಳಿತದಲ್ಲಿ ಎಲ್ಲಾ ಇಲಾಖೆಗಳಲ್ಲೂ ಮಿತಿ ಮೀರಿದ ಭ್ರಷ್ಟಾಚಾರ : ವಿಜಯೇಂದ್ರ

ಹಾಕುವ ಈ ಕಾಂಗ್ರೆಸ್ ಸರಕಾರವು, ಇವರಿಗೆ ಯಾವುದೇ ನ್ಯಾಯ ಕೊಡಲು ಸಾಧ್ಯ ಆಗುತ್ತಿಲ್ಲ ಎಂದು ದೂರಿದರು.

ಉದ್ಯೋಗ ಸೃಷ್ಟಿ ವಿಚಾರದಲ್ಲಿ ಏನು ಮಾಡಿದ್ದೀರಿ?, ಚುನಾವಣೆ ಸಂದರ್ಭದಲ್ಲಿ ಯುವಜನರಿಗೆ ಉದ್ಯೋಗ ಸೃಷ್ಟಿಸುವ ಭರವಸೆ ನೀಡಿದ್ದರು. ಕೇಂದ್ರ ಸರಕಾರದ ವಿರುದ್ಧ ಪದೇಪದೇ ಆರೋಪ ಮಾಡುತ್ತಾರೆ. ಹಾಗಿದ್ದರೆ ರಾಜ್ಯದಲ್ಲಿ ನಿಮ ಸರಕಾರ ಏನು ಮಾಡುತ್ತಿದೆ ಮಾನ್ಯ ಮುಖ್ಯಮಂತ್ರಿಗಳೇ ಎಂದು ಪ್ರಶ್ನಿಸಿದರು. ಎಷ್ಟು ಉದ್ಯೋಗ ಸೃಷ್ಟಿ ಮಾಡುವುದರಲ್ಲಿ ನೀವು ಯಶಸ್ವಿ ಆಗಿದ್ದೀರಿ? ಎಂದು ಕೇಳಿದರು.ಕಳೆದ ಬಾರಿ ಸುವರ್ಣ ಸೌಧದಲ್ಲಿ ಅಧಿವೇಶನ ನಡೆಯುವಾಗ ಹುಬ್ಬಳ್ಳಿಯಲ್ಲಿ ಯುವಜನತೆ ಪ್ರತಿಭಟನೆ, ಹಕ್ಕೊತ್ತಾಯ ಮಾಡುತ್ತಿದ್ದರು. ಕಾಂಗ್ರೆಸ್ ಸರಕಾರದ ಗಮನ ಸೆಳೆಯಲು ಪ್ರತಿಭಟನೆ ಮಾಡಿದರು. ಅದನ್ನೂ ನೀವು ಸಹಿಸಲಿಲ್ಲ ಎಂದು ವಾಗ್ದಾಳಿ ನಡೆಸಿದರು.
ಯುವಜನತೆ, ವಿದ್ಯಾರ್ಥಿ, ವಿದ್ಯಾರ್ಥಿನಿಯರ ಮೇಲೆ ಲಾಠಿ ಚಾರ್ಜ್ ಮಾಡಿದ್ದಾರೆ ಎಂದು ಆಕ್ರೊ?ಶ ಹೊರಹಾಕಿದರು. ಮುಖ್ಯಮಂತ್ರಿಗಳ ಭೇಟಿಗೆ ಸಮಯ ನಿಗದಿಪಡಿಸಲು ಹೈಕೋರ್ಟ್ ಮಧ್ಯಪ್ರವೇಶ ಮಾಡಬೇಕಾಯಿತು ಎಂದು ಗಮನಕ್ಕೆ ತಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ನಂತರ ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಇವರು ಪ್ರಾರಂಭವೇ ಮಾಡಿಲ್ಲ ಎಂದು ಟೀಕಿಸಿದರು. ವಿದ್ಯಾವಂತರು, ನಿರುದ್ಯೋಗಿಗಳಿಗೆ, ಯುವಜನರಿಗೆ ಉದ್ಯೋಗ ಸೃಷ್ಟಿಸುವ ಪ್ರಾಮಾಣಿಕ ಕಳಕಳಿ ಇವರಿಗೆ ಇದ್ದರೆ, ರಾಜ್ಯದಲ್ಲಿ 2.75 ಲಕ್ಷ ಹುದ್ದೆಗಳು ನೇಮಕಾತಿ ಆಗದೇ ಖಾಲಿ ಉಳಿಯುವ ಪರಿಸ್ಥಿತಿ ನಿರ್ಮಾಣ ಆಗುತ್ತಿರಲಿಲ್ಲ ಎಂದು ಹೇಳಿದರು.

# ಪೌರಕಾರ್ಮಿಕರನ್ನು ನಾವು ನಮ್ಮ ತಾಯಿಯಂತೆ ಕಾಣಬೇಕು: ಎ.ಆರ್.ಕೃಷ್ಣಮೂರ್ತಿ



**ಕೊಳ್ಳೇಗಾಲ.ಫೆ.12–** ಸಮಾಜದಲ್ಲಿ ಕೊಳಕು, ಕಸದಿಂದ ಮುಕ್ತ ಪರಿಸರವನ್ನು ನಿರ್ಮಾಣ ಮಾಡುವುದರಲ್ಲಿ ನಮ್ಮ ಪೌರಕಾರ್ಮಿಕರು ಮುಖ್ಯ ಕಾರಣ ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ಅವರು ಹೇಳಿದರು. ಪಟ್ಟಣದ ಸಿ ಡಿ.ಎಸ್. ಭವನದಲ್ಲಿ ಬುಧವಾರ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪೌರಕಾರ್ಮಿಕರ ಬಡಾವಣೆಯಲ್ಲಿ ರಸ್ತೆ ಅಗಲಿಕರಣ ಮಾಡಿದ್ದೆನೆ, ಇತರೆ ಜನಾಂಗದವರಂತೆ ಇವರು ಕೂಡ ವಿದ್ಯಾವಂತರಾಗಿ, ಸ್ವಾವಲಂಬಿಯಾಗಿ ಉತ್ತಮ ಜೀವನ ನಡೆಸುವಂತಾಗಬೇಕು. ಗ್ರಾಮ, ಪಟ್ಟಣ,ನಗರ, ಜಿಲ್ಲೆಗಳನ್ನು ಸ್ವಚ್ಛವಾಗಿಡಲು ಸಹಕಾರಿಯಾಗಿದ್ದಾರೆ ಬೆಳಗಿನ ಸೂಯ9ಉದಯಿಸುವ ಮೊದಲೇ ಇಡೀ ನಗರ ಪ್ರದೇಶವನ್ನು ಸ್ವಚ್ಛವಾಗಿರಿಸಿ ನಮ್ಮಗಳಿಗೆ ಉತ್ತಮ ವಾತಾವರಣವನ್ನು ನಿರ್ಮಿಸಿ, ಇಂದಿನ ಸಮಾಜದಲ್ಲಿ ಕಸದಿಂದ ಮುಕ್ತ ಪರಿಸರವನ್ನು ನಿರ್ಮಾಣ ಮಾಡುವುದರಲ್ಲಿ ನಮ್ಮ ಪೌರಕಾರ್ಮಿಕರ ಪಾತ್ರ ಮುಖ್ಯ ಕಾರಣವಾಗಿದೆ.

ಕರ್ನಾಟಕದಲ್ಲಿ ಇವತ್ತು ಮೈಸೂರು ಸಿಟಿ ನಂಬರ್.1 ಸ್ವಚ್ಛತಾ ನಗರ ಪ್ರದೇಶವಾಗಿದೆ ಎಂದರೆ ಅದಕ್ಕೆ ಮುಖ್ಯ ಕಾರಣಕರ್ತರು ನಮ್ಮ ಪೌರಕಾರ್ಮಿಕರು, ಸುತ್ತ, ಮುತ್ತಲಿನ ಪ್ರದೇಶವನ್ನು ಶುಚಿಯಾಗಿಡುವ ಜೊತೆಗೆ ನಮ್ಮಗಳಿಗೆ ಉತ್ತಮ ಗಾಳಿ,ಪರಿಸರ, ಆರೋಗ್ಯದಿಂದ ಜೀವನ ನಡೆಸಲು ಸಹಕಾರಿಯಾಗಿದ್ದಾರೆ, ಇವರಿಗೆ ನಾವು ಎಷ್ಟೆ ಕೃತಜ್ಞತೆ ಸಲ್ಲಿಸಿದರೂ ಸಾಲದೂ,ಉತ್ತಮ ಸ್ವಚ್ಛ ಸಮಾಜ ನಿರ್ಮಾಣಕ್ಕೆ ಅವರ ತ್ಯಾಗ, ಶ್ರಮ, ಬಹಳ ದೊಡ್ಡದು ನಾವೆಲ್ಲರೂ ಅವರನ್ನು ಗೌರವದಿಂದ ನಮ್ಮ ತಾಯಿಯಂತೆ ಕಾಣಬೇಕು.

ಮೈಸೂರು ಜಿಲ್ಲೆ ಮಹಾಪೌರರು ನಾರಾಯಣ ರಾಜ್ಯ ಅಧ್ಯಕ್ಷರು ನಿಮ್ಮೆಲ್ಲರ ಧ್ವನಿಯಾಗಿದ್ದಾರೆ, ರಾಜ್ಯದಲ್ಲಿ 12,692 ಜನರು ಪೌರ ಕಾರ್ಮಿಕರು ಖಾಯಂ ಆಗಿದ್ದಾರೆ ಇದಕ್ಕೆ ಮುಖ್ಯ ಕಾರಣ ನಮ್ಮ ಸರ್ಕಾರದ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಹೇಬ್ರು. ರಾಜ್ಯದಲ್ಲಿ ಕೃಷಿ ಮಾಡುವ ರೈತ ಎಷ್ಟು ಮುಖ್ಯನೂ, ದೇಶ ಕಾಯೋ ಸೈನಿಕರು ಎಷ್ಟು ಮುಖ್ಯನೂ,ಅದೇ ರೀತಿ ನಮ್ಮ ಸಮಾಜವನ್ನು ಶುಚಿ ಯಾಗಿಡುವ ಪೌರಕಾರ್ಮಿಕರು ಕೂಡ ನಮಗೆ ಬಹಳ ಮುಖ್ಯ. ಕೊಳ್ಳೇಗಾಲ ನಗರಸಭೆಯಲ್ಲಿ 36 ಜನರು ಖಾಯಂ ನೌಕರರು,23 ಜನರು ನೇರನೇಮಕಾತಿ, 22 ಜನರು ಇತರೆ ವಾಚರ್, ಸೂಪರ್‌ವೈಸಗಳಾಗಿ ಕೆಲಸ ಕಾಯ9ನಿರ್ವಹಿಸುತ್ತಿದ್ದಾರೆ.

ಒಟ್ಟು 81ಜನರಿದ್ದು ಇವರೆಲ್ಲರಿಗೂ ಆರೋಗ್ಯವಿಮೆ, 5ರಿಂದ 10 ಲಕ್ಷದವರೆಗೂ ಉಚಿತ ಚಿಕಿತ್ಸೆ ಇರುತ್ತದೆ. ಇದಲ್ಲದೆ ಒಂದು ತಿಂಗಳು ಹೆಚ್ಚುವರಿ ವೇತನವನ್ನು ನಮ್ಮ ಸರ್ಕಾರ ನೀಡುತ್ತದೆ.ಆರ್ಮುಗಂ, ಗಣೇಶ, ರಮೇಶ, ಶಿವಕುಮಾರ್, ಶರವಣ, ಸುಬ್ಬಯ್ಯ,ಸತ್ಯ, ಒಟ್ಟು 7 ಜನರು ಇವತ್ತು ಖಾಯಂ ನೌಕರರಾಗಿದ್ದಾರೆ. ಅನೇಕ ಕಡೆ ಬೆಂಗಳೂರಿನಲ್ಲಿ ನಿರುದ್ಯೋಗದ ಸಮಸ್ಯೆಯಿಂದ ಬೇರೆ ಸಮುದಾಯದ ಜನರು ಬೀದಿ ಸ್ವಚ್ಛತಾ ಕಾರ್ಯಕ್ಕೆ ಪೌರಕಾಮಿ9ಕರ ಕೆಲಸ ಮಾಡಲು ಬರುತ್ತಿದ್ದಾರೆ, ನಿಮ್ಮ ಹುದ್ದೆಗೆ ತುಂಬಾ ಮಹತ್ವ ಇದೆ. ಹಾಗಾಗಿ ನಿಮಗೆ ಗೌರವಯುತವಾಗಿ ಉತ್ತಮ ಬದುಕನ್ನು ಕಲ್ಪಿಸಿಕೊಳ್ಳಲು ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಹೆಬ್ರು ಹಣಕಾಸಿನ ಸಚಿವರಾಗಿ ನಿಮ್ಮ ಪರವಾಗಿ ಸ್ಪಂದಿಸಿದ್ದಾರೆ. ನಾನೂ ಕೂಡ ನಿಮ್ಮ ಪರವಾಗಿರುತ್ತೇನೆ ಎಂದು ಶಾಸಕರು ತಿಳಿಸಿದರು.

ಇದೇ ವೇಳೆ ಪೌರಕಾರ್ಮಿಕರಿಗೆ ಸ್ವತಃ ಊಟ ಬಡಿಸುವುದರ ಜೊತೆಗೆ ತಾವೂ ಕೂಡ ಭಾಗಿಯಾಗಿದ್ದರು. ಉತ್ತಮವಾಗಿ ಸೇವೆ ಸಲ್ಲಿಸಿದ ಪೌರಕಾರ್ಮಿಕರಿಗೆ, ನಿವೃತ್ತ ನೀರುಗಂಟಿ, ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಿದರು. ಕೀಡಾಕೂಟದಲ್ಲಿ ಭಾಗವಹಿಸಿ ಜಯಗಳಿಸಿದ್ದ ಪೌರ ಕಾರ್ಮಿಕರಿಗೆ ಬಹುಮಾನವನ್ನು ವಿತರಿಸಿದರು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರು ರಾಜೇಂದ್ರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್, ನಗರಸಭೆ ಪೌರಯುಕ್ತರು ರುದ್ರಮ್ಮ ಶರಣಯ್ಯ, ತಾ.ಪಂ.ಇಒ ಗುರುಶಾಂತಪ್ಪ ಬೆಳ್ಳುಂಡಗಿ, ನಗರಸಭೆ ಮಾಜಿ ಅಧ್ಯಕ್ಷ ರೇಖಾ ರಮೇಶ್, ನಗರಸಭೆಯ ಮಾಜಿ ಸದಸ್ಯರುಗಳು, ಪೌರಕಾರ್ಮಿಕರ ಸಂಘದ ರಾಜಣ್ಣ ಹಾಗೂ ಇತರರು ಇದ್ದರು.

# ಕ್ರೀಡಾ ಸಾಧಕ ವಿದ್ಯಾರ್ಥಿಗಳಿಗೆ ಅಭಿನಂದನೆ



**ಚಾಮರಾಜನಗರ.ಫೆ.12:–** ಚಾಮರಾಜನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ತೃತೀಯ ಬಿ.ಕಾಂ ವಿದ್ಯಾರ್ಥಿಯಾದ ಆರ್. ನವೀನ್ ಕುಮಾರ್ ನಾಗಲ್ಯಾಂಡ್‌ನಲ್ಲಿ ನಡೆದ ಮ್ಯಾರಥಾನ್ ಓಟದಲ್ಲಿ 11ನೇ ಸ್ಥಾನ ಪಡೆದಿದ್ದಾರೆ.

ಹರಿಯಾಣದಲ್ಲಿ ಫೆಬ್ರವರಿ 13ರಂದು ನಡೆಯಲಿರುವ ಕ್ರಾಸ್ ಕ್ರಂಟಿ ಕ್ರೀಡೆಯಲ್ಲಿ ಅಂತಿಮ ವರ್ಷದ ಬಿ.ಕಾಂ ವಿದ್ಯಾರ್ಥಿಗಳಾದ ಮಧುಸೂದನ್ ಹಾಗೂ ಆರ್. ನವೀನ್ ಕುಮಾರ್ ಆಯ್ಕೆಯಾಗಿ ಭಾಗವಹಿಸುತ್ತಿದ್ದಾರೆ. ಪ್ರಾಂಶುಪಾಲರಾದ ಡಾ. ಆರ್.ಎಸ್. ಅಶ್ವಿನಿ, ಕ್ರೀಡಾ ಸಂಚಾಲಕರಾದ ಜಿ.ಕೆ ದೀಪ್ತಿ, ಅಧ್ಯಾಪಕರು ಹಾಗೂ ಉಪನ್ಯಾಸಕರು ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಿರುವ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

# ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ಲೇಬರ್ ಕೋಡ್ ವಿರುದ್ದ ನಗರದಲ್ಲಿ ಪ್ರತಿಭಟನೆ




**ಬಳ್ಳಾರಿ, ಫೆ.12–** ಕೇಂದ್ರ ಕಾರ್ಮಿಕ ಸಂಘಟನೆಗಳು ಕರೆ ಮೇರೆಗೆ ಅಖಿಲ ಭಾರತ ಸಾರ್ವತ್ರಿಕ ಮುಷ್ಕರದ ಅಂಗವಾಗಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯಿಂದ ಇಂದು ನಗರದಲ್ಲಿ ಬೃಹತ್ ಮೆರವಣಿಗೆ ಹಮ್ಮಿಕೊಳ್ಳಲಾಗಿತ್ತು. ರೈತ ಸಂಘಟನೆಗಳನ್ನು ಒಳಗೊಂಡ ಸಂಯುಕ್ತ ಹೋರಾಟ ಕರ್ನಾಟಕವು ಸಹ ಮುಷ್ಕರಕ್ಕೆ ಬೆಂಬಲ ನೀಡಿ, ಮೆರವಣಿಗೆಯಲ್ಲಿ ಪಾಲ್ಗೊಂಡಿತ್ತು.

ನಗರದ ನಾರಾಯಣ್ ರಾವ್ ಪಾರ್ಕ್ ನಿಂದ ಡಿಸಿ ಕಚೇರಿವರಿಗೆ ಮೆರವಣಿಗೆಯಲ್ಲಿ ಸಾಗಿದ ಕಾರ್ಮಿಕರು, ರೈತರು ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ಲೇಬರ್ ಕೋಡ್ , ವಿಬಿ ಜಿರಾಮ್ ಜಿ ಇನ್ನಿತರ ಕಾರ್ಮಿಕ-ರೈತ ವಿರೋಧಿ ನೀತಿಗಳ ವಿರುದ್ಧ ಧಿಕ್ಕಾರದ ಘೋಷಣೆ ಕೂಗಲಾಯ್ತು.

ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ ನಡೆದ ಸಭೆಯಲ್ಲಿ ಜೆಸಿಟಿಯು ಹಾಗೂ ಸಂಯುಕ್ತ ಹೋರಾಟ ಕರ್ನಾಟಕದ ಮುಖಂಡರು ಮಾತನಾಡಿ. "ಲೇಬರ್ ಕೋಡ್ಗಳಿಂದ ದುಡಿಯುವವರ ಬದುಕು ಬಂಗಾರವಾಗುತ್ತದೆಂದು ಹೇಳಲಾಗುತ್ತದೆ. ಆದರೆ ಮುಷ್ಕರದ ಹಕ್ಕನ್ನು ಕಸಿದುಕೊಳ್ಳುವ, ಕಾರ್ಮಿಕರ ಸಾಮೂಹಿಕ ಚೌಕಾಸಿ ಹಕ್ಕನ್ನು ಮೊಟಕುಗೊಳಿಸುವ, ನಿಗದಿತ ಅವಧಿಗೆ ಉದ್ಯೋಗದ ಮೂಲಕ ಖಾಯಂ ಸ್ವರೂಪದ ಕೆಲಸಗಳಿಗೆ ತಿಲಾಂಜಲಿ ಹಾಡುವ ಹುನ್ನಾರ ಇದೆ.

ದಿನಕ್ಕೆ 12 ತಾಸು ಕೆಲಸದ ಅವಧಿ ಹೆಚ್ಚಿಸಿರುವುದು ಮತ್ತು ಮಹಿಳಾ ಉದ್ಯೋಗಿಗಳಿಗೆ ರಾತ್ರಿ ಪಾಳೀಯಲ್ಲೂ ದುಡಿಸಿಕೊಳ್ಳಲು ಅವಕಾಶ ನೀಡುವ ಈ ಲೇಬರ್ ಕೋಡ್ ಗಳು ಕಾರ್ಮಿಕರ ಆರೋಗ್ಯ, ಭದ್ರತೆ ಬಗ್ಗೆ ಕಿಂಚಿತ್ತೂ ಕಾಳಜಿ ತೋರದೆ, ತ್ಯಾಗ-ಬಲಿದಾನಗಳ ಮೂಲಕ ಗಳಿಸಿಕೊಂಡ ಹಕ್ಕುಗಳನ್ನು ಕಿತ್ತುಕೊಳ್ಳುತ್ತಿದವ.

ಬಂಡವಾಳಶಾಹಿಗಳ ವ್ಯಾಪಾರ ಸುಗಮಗೊಳಿಸುವ ಉದ್ದೇಶದಿಂದ 29 ಕಾರ್ಮಿಕ ಕಾಯ್ದೆಗಳನ್ನು ತಿದ್ದುಪಡಿ ಮಾಡಿ ಗರಿಷ್ಠ ಲಾಭಗಳಿಸಲು ಅವಕಾಶ ಕಲ್ಪಿಸಿ ಮತ್ತಷ್ಟು ಕಾರ್ಮಿಕರನ್ನು ಶೋಷಿಸಲು ಲೇಬರ್ ಕೋಡ್ಗಳನ್ನು ಜಾರಿಗೊಳಿಸಲಾಗುತ್ತಿದೆ ಅದಕ್ಕಾಗಿ ರಾಜ್ಯ ಸರ್ಕಾರ ಲೇಬರ್ ಕೋಡ್ ಕರ್ನಾಟಕದಲ್ಲಿ ಜಾರಿಗೆ ತರಬಾರದೆಂದು ಆಗ್ರಹಿಸಲಾಯಿತು."

ನರೇಗಾ ಯೋಜನೆಯನ್ನು ವಿಬಿ-ಜಿ-ರಾಮ್ ಎಂದು ಬದಲಿಸಿ ಉದ್ಯೋಗ ಖಾತ್ರಿಯ ಹಕ್ಕನ್ನೇ ಕಸಿದುಕೊಂಡು, ಹಳ್ಳಿಯ ಬಡಜನರ ಆಸರೆಯನ್ನು ಕಿತ್ತುಕೊಂಡಿದೆ.

ಕೇಂದ್ರ ಸರ್ಕಾರದ ವಿವಿಧ ಸಾಮಾಜಿಕ ಯೋಜನೆಗಳಡಿ ದುಡಿಯುವ ಕೋಟ್ಯಾಂತರ ಆಶಾ, ಅಂಗನವಾಡಿ, ಬಿಸಿಯೂಟ ಕಾರ್ಮಿಕರನ್ನು ಸರ್ಕಾರಿ ನೌಕರರ ಸ್ಥಾನಮಾನ ನೀಡದೇ, ಕನಿಷ್ಠ ವೇತನ ಮತ್ತು ಪಿಎಫ್, ಇಎ, ನಿವೃತ್ತಿ ಪರಿಹಾರಗಳನ್ನು ಒದಗಿಸದೇ ಬಿಡಿಗಾಸಿನಲ್ಲಿ ದುಡಿಸಿಕೊಂಡು ಶೋಷಿಸಲಾಗುತ್ತಿದೆ. ಅದಕ್ಕಾಗಿ ದುಡಿಯುವ ಜನರ ಹಕ್ಕುಗಳನ್ನು ರಕ್ಷಿಸಲು ನಮ್ಮ ಹೋರಾಟ ಅಗತ್ಯ ಎಂದರು.

ಪ್ರತಿಭಟನೆಯಲ್ಲಿ ಎಐಯುಟಿಯುಸಿ ದೇವದಾಸ್ ಅಧ್ಯಕ್ಷತೆ ವಹಿಸಿದ್ದರು, ಆರ್. ಸೋಮಶೇಖರ್ ಗೌಡ, ಸಿಐಟಿಯು ರಾಜ್ಯ ಉಪಾಧ್ಯಕ್ಷ ಸತ್ಯ ಬಾಬು, ಎಐಟಿಯುಸಿ ಜಿಲ್ಲಾ ಅಧ್ಯಕ್ಷ ಆದಿ ಮೂರ್ತಿ, ಅಖಿಲ ಭಾರತ ವಿಮಾ ನೌಕರರ ಸಂಘಟನೆಯ ಸೂರ್ಯನಾರಯಣ, ಬ್ಯಾಂಕ್ ನೌಕರರ ಸಂಘಟನೆಯ ಘನ ಮಲ್ಲಿಕಾರ್ಜುನ,ಸುರೇಶ್, ಗೀತ, ರೈತ ಸಂಘಟನೆಯ ಮುಖಂಡರಾದ ಯು.ಬಸವರಾಜ್ , ಗೋವಿಂದ್, ಮಾಧವ ರೆಡ್ಡಿ, ಸಂಗನಕಲ್ಲು ಕೃಷ್ಣಪ್ಪ, ಹನುಮಂತಪ್ಪ, ಎರಿಸ್ವಾಮಿ, ನಾಗರತ್ನ, ಕಟ್ಟಿಬಸಪ್ಪ, ಮಲ್ಲಮ್ಮ, ಚಂದ್ರಕುಮಾರಿ, ಜಗದೀಶ್ ಮತ್ತಿತರರು ಭಾಗವಹಿಸಿದ್ದರು.

# ವಯನಾಡ್ ಜಿಲ್ಲೆಯಲ್ಲಿ ಆದಿವಾಸಿ ಜಗತ್ತಿನ ಸ್ವಾವಲಂಬನೆಯ ಕಲ್ಪನೆಗಳು ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ



**ಚಾಮರಾಜನಗರ, ಫೆ.12–** ಕೇರಳದ ವಯನಾಡ್ ಜಿಲ್ಲೆಯ ಸುಲ್ತಾನ್ ಬತ್ತೇರಿಯಲ್ಲಿ ನಡೆದ ಮಹತ್ವದ ಆದಿವಾಸಿ ಜಗತ್ತಿನಲ್ಲಿ ಸ್ವಾವಲಂಬನೆಯ ಕಲ್ಪನೆಗಳು ಕುರಿತ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಚಾಮರಾಜನಗರ ಜಿಲ್ಲೆಯನ್ನು ಜಿಲ್ಲಾಧಿಕಾರಿ ಶ್ರೀರೂಪ ಅವರು ಪ್ರತಿನಿಧಿಸಿದರು.ವಯನಾಡಿನ ಸುಲ್ತಾನ್ ಬತ್ತೇರಿಯಲ್ಲಿ ನಡೆದ ಮೂರು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿದ ಚಾಮರಾಜನಗರದ ಜಿಲ್ಲಾಧಿಕಾರಿ ಶ್ರೀರೂಪ ಅವರು ಗಡಿ ಪ್ರದೇಶದ ಆದಿವಾಸಿ ಸಮುದಾಯಗಳ ಕುರಿತು ಚರ್ಚೆಗಳಿಗೆ ಮೀಸಲಾಗಿರುವ ರಾಷ್ಟ್ರೀಯ ವೇದಿಕೆಯಲ್ಲಿ ಚಾಮರಾಜನಗರ ಜಿಲ್ಲೆಯನ್ನು ಪ್ರತಿನಿಧಿಸಿದರು.

ಕೇರಳದ ವಯನಾಡು, ತಮಿಳುನಾಡಿನ ನೀಲಗಿರಿ ಮತ್ತು ಕರ್ನಾಟಕ ರಾಜ್ಯದ ಚಾಮರಾಜನಗರ ಸಂಗಮದಲ್ಲಿ ನಡೆದ ಈ ವಿಚಾರ ಸಂಕಿರಣವು, ವಿದ್ವಾಂಸರು, ಸಂಶೋಧಕರು, ನೀತಿ ನಿರೂಪಕರು ಮತ್ತು ಆಡಳಿತಗಾರರನ್ನು ಒಟ್ಟುಗೂಡಿಸಿ ಸ್ಥಳೀಯ ಸಮುದಾಯಗಳು, ಆಡಳಿತ ಮತ್ತು ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಿತು.

ವಿಚಾರ ಸಂಕಿರಣ ಉದ್ಘಾಟಿಸಿದ ಜಿಲ್ಲಾಧಿಕಾರಿ ಶ್ರೀರೂಪ ಅವರು ಮಾತನಾಡಿ ಚಾಮರಾಜನಗರ ಜಿಲ್ಲೆಯ ಬುಡಕಟ್ಟು ಸಮುದಾಯಗಳಾದ ಸೋಲಿಗ, ಜೇನು ಕುರುಬ ಮತ್ತು ಕಾಡು ಕುರುಬ ಜನರ ಸಾಮಾಜಿಕ-ಆರ್ಥಿಕ ಪರಿಸ್ಥಿತಿಗಳು, ಶೈಕ್ಷಣಿಕ ಸವಾಲುಗಳು, ಜೀವನೋಪಾಯದ ಕಾಳಜಿಗಳು ಮತ್ತು ಅರಣ್ಯ ಅವಲಂಬಿತ ಪ್ರದೇಶಗಳಲ್ಲಿ ವಾಸಿಸುವ ವಾಸ್ತವ ಕುರಿತು ವ್ಯಾಪಕವಾಗಿ ವಿವರಿಸಿದರು.

ಆದಿವಾಸಿ ಅಭಿವೃದ್ಧಿಯ ಕುರಿತು ಅರ್ಥಪೂರ್ಣ ಚರ್ಚೆಗಳು ಕ್ಷೇತ್ರದಲ್ಲಿ ವಾಸ್ತವವಾಗಿ ಅನುಷ್ಠಾನವಾಗಬೇಕಿದೆ. ಆಡಳಿತಾತ್ಮಕ ಅನುಭವ ಮತ್ತು ಸಮುದಾಯದ ಧ್ವನಿಗಳಿಂದ ರೂಪುಗೊಳ್ಳಬೇಕು ಎಂದು ಜಿಲ್ಲಾಧಿಕಾರಿಯವರು ಒತ್ತಿ ಹೇಳಿದರು.

ರಾಷ್ಟ್ರೀಯ ಮಟ್ಟದ ಸಂವಾದದ ಮಹತ್ವವನ್ನು ಎತ್ತಿ ತೋರಿಸಿದ ಜಿಲ್ಲಾಧಿಕಾರಿ ಶ್ರೀರೂಪ ಅವರು ಇಂತಹ ವಿಚಾರ ಸಂಕಿರಣಗಳು ಅಂತರ-ಜಿಲ್ಲಾ ಸಹಯೋಗ, ಜ್ಞಾನ ಹಂಚಿಕೆ ಮತ್ತು ನೀತಿ ಸೂಕ್ಷ್ಮತೆಯನ್ನು ಬೆಳೆಸುತ್ತವೆ. ಅಂತಿಮವಾಗಿ ರಾಜ್ಯ ಗಡಿಗಳಲ್ಲಿ ಬುಡಕಟ್ಟು ಸಮುದಾಯಗಳ ಸಬಲೀಕರಣ ಮತ್ತು ಸುಸ್ಥಿರ ಅಭಿವೃದ್ಧಿಗೆ ಕೊಡುಗೆ ನೀಡುತ್ತವೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ರಾಷ್ಟ್ರೀಯ ವಿಚಾರ ಸಂಕಿರಣದ ಸಾರಾಂಶಗಳನ್ನೊಳಗೊಂಡ ಬುಕ್ ಆಫ್ ಅಬ್ಸ್ಟ್ರಾಕ್ಸ್ ಪುಸ್ತಕವನ್ನು ಬಿಡುಗಡೆ ಮಾಡಿದರು. ಇದು ಚರ್ಚೆಗಳ ಶೈಕ್ಷಣಿಕ ಅಡಿಪಾಯವನ್ನು ಗುರುತಿಸುತ್ತದೆ ಮತ್ತು ಸಂಶೋಧನೆ-ಬೆಂಬಲಿತ ನೀತಿ ಚರ್ಚೆಗಳ ಮಹತ್ವವನ್ನು ತಿಳಿಸಲಿದೆ.

ಚಾಮರಾಜನಗರ ಜಿಲ್ಲಾಡಳಿತವು ಸಹಯೋಗ ಮತ್ತು ಸಾಂಸ್ಕೃತಿಕವಾಗಿ ಒಟ್ಟುಗೂಡುವಿಕೆಯಿಂದ ಬುಡಕಟ್ಟು ಸಮುದಾಯಗಳ ಸಮಗ್ರ ಆಡಳಿತ ಮತ್ತು ಅಭಿವೃದ್ಧಿಗೆ ತನ್ನ ಬದ್ಧತೆಯನ್ನು ಪುನರುಚ್ಚರಿಸಿತು.

ಸುಲ್ತಾನ್ ಬತ್ತೇರಿಯ ಶಾಸಕ ಐ.ಸಿ. ಬಾಲಕೃಷ್ಣನ್, ಮುನ್ಸಿಪಾಲ್ಟಿ ಅಧ್ಯಕ್ಷ ರಸೀನ ಅಬ್ದುಲ್ ಖಾದರ್, ಬೆಂಗಳೂರಿನ ಎನ್.ಎಲ್.ಎಸ್.ಐ.ಯುನ ಸಾಮಾಜಿಕ ಒಳಗೊಳ್ಳುವಿಕೆಯ ಅಧ್ಯಯನ ಕೇಂದ್ರದ ನಿರ್ದೇಶಕರಾದ ಡಾ. ಸೋನಿ ಪೆಲ್ಲಿಸ್ಸೆರಿ, ಸುಲ್ತಾನ್ ಬತ್ತೇರಿಯ ಸೆಂಟ್ ಮೇರಿಸ್ ಕಾಲೇಜಿನ ವ್ಯವಸ್ಥಾಪಕ ಡಾ. ಜೀವರ್ಗೀಸ್ ವಾರ್ ಬಾರ್ನಬಾಸ್, ಸ್ಥಾನಿಕ ವ್ಯವಸ್ಥಾಪಕರಾದ ರೆ. ಬೇಬಿಜಾನ್, ಬುಡಕಟ್ಟು ಅಭಿವೃದ್ದಿ ಅಧಿಕಾರಿ ಕೆ.ಕೆ. ಮೋಹನ್ ದಾಸ್, ಪ್ರೊ. ವರ್ಗೀನಿಯಸ್ ಕ್ಸಾಕ್ಸ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಕಸ ಸಂಗ್ರಹಣೆ ಸ್ವಚ್ಛತಾ ಕಾರ್ಯಪಡೆ ಪ್ರಚಾರಕ್ಕೆ ಸೀಮಿತ

**ಕೋಲಾರ,ಫೆ,12–** ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ಸರ್ಕಾರಿ ಸ್ವತ್ತುಗಳಲ್ಲಿ ಸೇರಿದಂತೆ ಕಸವನ್ನು ಎಲ್ಲೆಂದರಲ್ಲಿ ಕಸ ಎಸೆಯುವವರ ವಿರುದ್ಧ ದಂಡ ವಿಧಿಸಲು ಜಿಲ್ಲಾಧಿಕಾರಿಗಳು ನಗರಸಭೆ ಮತ್ತು ಪುರಸಭೆ ಅಧಿಕಾರಿಗೆ ಅದೇಶಿಸುವ ಮೂಲಕ ಸ್ವಚ್ಚತೆಗೆ ಒತ್ತು ನೀಡಿ ರಾಜ್ಯದಲ್ಲಿ ಕೋಲಾರ ಜಿಲ್ಲೆಯನ್ನು ಮಾದರಿ ಜಿಲ್ಲೆಯನ್ನಾಗಿ ಮಾಡಲು ಸಭೆಗಳಲ್ಲಿ ಆದೇಶಿಸಿರುವುದೇನೂ ಸರಿ ಅದರೆ ಸಂಬಂಧ ಪಟ್ಟ ಅಧಿಕಾರಿಗಳು ಕಸ ಸಂಗ್ರಹಣೆ ಅಗತ್ಯವಾದ ಕ್ರಮಗಳ ಕುರಿತು ಖಡಕ್ ಅದೇಶಗಳ ಸೂಚನೆಯನ್ನು ಜಾರಿ ಮಾಡ ಬೇಕಾಗಿದೆ.

ಕಸವನ್ನು ಎಲ್ಲೆಂದರಲ್ಲಿ ಎಸೆಯುವುದು, ಶೇಖರಿಸುವಂತ ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ನಿಯಂತ್ರಿಸುವ ಸಲುವಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕ್ರಮಗಳನ್ನು ಕೈಗೊಳ್ಳುತ್ತಿರುವ ಜೂತೆಗೆ ಕಸ ಸಂಗ್ರಹಣೆಗೆ ಸಂಬಂಧ ಪಟ್ಟ ಅಧಿಕಾರಿಗಳು ಒತ್ತು ನೀಡಬೇಕಾಗಿದೆ.ನಗರದಲ್ಲಿರುವ 35 ವಾರ್ಡ್‌ಗಳಲ್ಲಿ ಕಸ ಸಂಗ್ರಹಣೆ ಮಾಡಲು ಕಸ ಸಂಗ್ರಹಣೆ ವಾಹನಗಳು ಮನೆ ಮನೆಯ ಕಸ ಸಂಗ್ರಹವನ್ನು ಪ್ರತಿ ದಿನ ಸಾಧ್ಯವಾಗದಿದ್ದಲ್ಲಿ ಎರಡು ದಿನಕ್ಕೊಮ್ಮೆಯಾದರೂ ಸಂಗ್ರಹಿಸ ಬೇಕು. ಅದರೆ ಕಸ ಸಂಗ್ರಹದ ವಾಹನಗಳು 4–5 ದಿನಗಳಾದರೂ ಬಾರದೆ ಹೋದಾಗ ಸಾರ್ವಜಿಕರಿಗೆ ಕಸವನ್ನು ಎಲ್ಲೆಂದರೆ ಅಲ್ಲಿ ಸುರಿಯುವುದು ಅನಿವಾರ್ಯವಾಗಲಿದೆ.

ಒಣಕಸವನ್ನು ಮನೆಗಳಲ್ಲಿ ಇಟ್ಟು ಕೊಂಡು ಕಸ ಸಂಗ್ರಹಣೆಯ ವಾಹನ ಬಂದಾಗ ವಿಲೇ ಮಾಡಬಹುದು ಅದರೆ ಹಸಿ ಕಸವನ್ನು ಎರಡು ದಿನದ ಮೇಲೆ ಇಟ್ಟು ಕೊಂಡಲ್ಲಿ ಸುತ್ತಮುತ್ತಲು ದುರ್ವಾಸನೆ ಉಂಟಾಗಲಿದೆ ಹಾಗಾಗಿ ಸಾರ್ವಜನಿಕರು ಮನೆಯಿಂದ ಹೊರಗೆ ಸುರಿಯುವುದು ಅನಿವಾರ್ಯವಾಗುವುದು ಆಗಾ ಅವರಿಗೆ ದಂಡ ವಿಧಿಸಲು ಹೋದರೆ ಸಾರ್ವಜನಿಕರಿಂದ



ಛೀ ಮಾರೆ ಹಾಕಿಸಿ ಕೊಳ್ಳ ಬೇಕಾಗುವುದು. ಅದಕ್ಕೆ ಅವಕಾಶ ನೀಡದಂತೆ ನಗರಸಭೆ ಮತ್ತು ಪುರಸಭೆಯ ಸಂಬಂಧ ಪಟ್ಟ ಅಧಿಕಾರಿಗಳು ಕಸ ಸಂಗ್ರಹಣೆ ಮಾಡುವುದು ನಿರಂತರವಾಗಿ ಮಾಡ ಬೇಕಾಗಿದೆ. ವಾರ್ಡಗಳಲ್ಲಿ ನಿಗಧಿತ ಅವಧಿಯಲ್ಲಿ ಕಸ ಸಂಗ್ರಹಿಸಿದರೆ ಸಾರ್ವಜನಿಕರ ವೈಯುಕ್ತಿಕ ಕೆಲಸ ಕಾರ್ಯಗಳಿಗೆ ಅನುವುಂಟಾಗುವುದು ಅದರೆ ಯಾವಾಗ ಅಂದರೆ ಅವಾಗ ಬಂದಲ್ಲಿ ಸಾರ್ವಜನಿಕರು ತಮ್ಮ ವೈಯುಕ್ತಿಕ ಕೆಲಸ ಕಾರ್ಯಗಳಲ್ಲಿ ತೊಡಗಿರುವಾಗ ಕಸವನ್ನು ವಾಹನಕ್ಕೆ ತುಂಭಲು ಅನಾನುಕೊಲವಾಗಲಿದೆ

ಕಸ ಸಂಗ್ರಹಣೆಯ ಸಂದರ್ಭಧಲ್ಲಿ ಸಾರ್ವಜನಿಕರು ಹಸಿ ಕಸ ಮತ್ತು ಒಣ ಕಸವನ್ನು ವಿಂಗಡಿಸಿ ವಿತರಿಸುವುದು ಹಂತ ಹಂತವಾಗಿ ಸಾರ್ವಜನಿಕರಲ್ಲಿ ಅರಿವುಂಟಾಗುತ್ತಿದೆ. ನಿಗಧಿತ ಅವಧಿಯಲ್ಲಿ ಬಾರದೆ ಕೆಲವೊಂದು ಸಂದರ್ಭಗಳಲ್ಲಿ ಕಸ ಸಂಗ್ರಹಣೆ ಸಾಧ್ಯವಾಗದ ಸಂದರ್ಭದಲ್ಲಿ ಕಸದ ಬುಟ್ಟಿಗಳನ್ನು ಮನೆಯ ರಸ್ತೆ ಬದಿ ಇಟ್ಟರೆ ಅದನ್ನು ಸಂಗ್ರಹಿಸಿ ಕೊಳ್ಳಲು ಕಸ ಸಂಗ್ರಹಣೆ ಸಿಬ್ಬಂದಿಗಳಿಗೆ ಸೂಚಿಸ ಬೇಕು.

ಈಗಾಗಲೇ ಸ್ವಚ್ಚತೆಯ ಕಾರ್ಯಪಡೆಯನ್ನು ರಚಿಸಲಾಗಿರುವುದು ಕೆಲ ದಿನದ ಮಟ್ಟಿಗೆ ಪ್ರಚಾರ ಪಡೆಯಿತು ನಂತರದಲ್ಲಿ ಅದರ ಸದ್ದು ಸುದ್ದಿಯೇ ಇಲ್ಲದಂತಾಗಿದೆ. ಅದರೆ ಕಾರ್ಯಚಟುವಟಿಕೆಗಳು ತಿಳಿಯದಂತಾಗಿದೆ. ಕಸ ಸಂಗ್ರಹಣೆಗೆ ವಾರ್ಡಿಗೊಂದು ವಾಹನಗಳು ಇದ್ದರೂ ಸಹ ಕಸ ಸಂಗ್ರಹಣೆಗೆ ವಾಹನಗಳು ಕೆಲವೊಂದು ವಾರ್ಡ್‌ಗಳಲ್ಲಿ ವಾರವಾದರೂ ಸಹ ಬರುವುದಿಲ್ಲ ಆರೋಗ್ಯ ನಿರೀಕ್ಷಕರಿಗೆ ಸಾರ್ವಜನಿಕರು ಕರೆ ಮಾಡಿದರೂ ಸ್ವೀಕರಿಸುವುದೇ ಇಲ್ಲ. ಸಮಸ್ಯೆಗಳನ್ನು ಹೇಳಿ ಕೊಳ್ಳಲು ನಗರ ಸಭೆ ಪುರಸಭೆಗಳಲ್ಲಿ ಹೇಳುವವರೂ ಕೇಳುವವರೂ ಇಲ್ಲದಂತಾಗಿದೆ. ಸಹಾಯವಾಣಿ, ದೂರುಗಳ ಸ್ವೀಕಾರ ಕೌಂಟರ್‌ಗಳು ಶೋಕಿಗೆ ಇರುವಂತೆ ಕಾಣುವುದು ಕೌಂಟರ್ ಇದ್ದರೂ ಸ್ವೀಕರಿಸುವಂತ ಸಿಬ್ಬಂದಿಯೇ ನಾಪತ್ತೆ ಅಗಿರುತ್ತಾನೆ, ಇನ್ನು ಸಂಪರ್ಕಿಸಲು ಇರುವ ದೂರವಾಣಿಗಳು ಮೊಬೈಲ್‌ಗಳು ಜೀವಂತ ಇದ್ದು ಸತ್ತಂತೆ ಇರುವುದು ಏಕೆಂದರೆ ಸ್ವೀಕರಿಸುವುದೇ ಇಲ್ಲ. ಬೆಳಿಗ್ಗೆ, ಮಧ್ಯಾಹ್ನ ,ಸಂಜೆ ಯಾವಗಾದರರೂ ಮಾಡಿ ರಿಂಗ್ ಅಗುತ್ತಿರುತ್ತೆ ಸ್ವೀಕರಿಸುವವರು ಗತಿ ಇರುವುದಿಲ್ಲ.

ಈ ರೀತಿಯ ಅವ್ಯವಸ್ಥೆಗಳಿಂದ ಇದ್ದರೆ ನಮ್ಮ ಜಿಲ್ಲೆಯನ್ನು ಮಾದರಿ ಮಾಡಲು ಸಾಧ್ಯವೇ? ಎಲ್ಲ ವ್ಯವಸ್ಥೆಗಳು ಸಮರ್ಪಕವಾಗಿರ ಬೇಕಾದರೆ ಅಧಿಕಾರಿಗಳಿಗೆ ಮೊದಲು ಅರಿವು ನೀಡ ಬೇಕಾಗಿದೆ. ನಂತರದಲ್ಲಿ ಸಾರ್ವಜನಿಕರಿಗೆ ಅರಿವು ನೀಡ ಬೇಕು. ಅರಿವು ಕಾರ್ಯಕ್ರಮಗಳು ಕೇವಲ ಪ್ರಚಾರಕ್ಕೆ ಸೀಮಿತಗೊಳಿಸಿದರೆ ಏನೊಂದು ಪ್ರಯೋಜನವಾಗದು ಎಂಬುವುದನ್ನು ಉನ್ನತ ಮಟ್ಟದ ಅಧಿಕಾರಿಗಳಿಗೆ ಕಾರ್ಯಗಾರಗಳ ಮೂಲಕ ಅರಿವುಂಟು ಮಾಡ ಬೇಕೆಂಬುವುದು ಸಾರ್ವಜನಿಕರ ಕಿವಿ ಮಾತಾಗಿದೆ.

# ಜಲ್ಲಿ ಕ್ರಷರ್ ಉಳಿಸಿ; ನಾಗನಾಳ ಗ್ರಾಮಸ್ಥರ ಒತ್ತಾಯ

**ಕೋಲಾರ,ಫೆ.12–** ನಾಗನಾಳ ಗ್ರಾಮದ ಸರ್ವೇ ನಂಬರ್ 41 & 42 ರಲ್ಲಿರುವ ಸೋಮಶೇಖರ್ ಅವರಿಗೆ ಸೇರಿದ ಜಲ್ಲಿ ಕ್ರಷರ್ ನಿಂದ ಗ್ರಾಮಸ್ಥರಿಗೆ ಯಾವುದೇ ರೀತಿಯ ತೊಂದರೆಯಾಗುತ್ತಿಲ್ಲ. ಸುಳ್ಳು ದೂರುಗಳನ್ನು ಪರಿಗಣಿಸದೆ ಜಲ್ಲಿ ಕ್ರಷರ್ ಮತ್ತು ಕಲ್ಲು ಗಣಿಗಾರಿಕೆಯನ್ನು ನಡೆಸಲು ಅವಕಾಶ ಮಾಡಿಕೊಡಬೇಕೆಂದು ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ನಾಗನಾಳ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಪ್ರತಿಭಟನೆ ನಡೆಸಿ ಎಡಿಸಿ ಮಂಗಳಾ ಮತ್ತು ಗಣಿ ಇಲಾಖೆ ಅಧಿಕಾರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಿಸಾನ್ ಕಾಂಗ್ರೆಸ್ ಜಿಲ್ಲಾ ಮಾಜಿ ಅಧ್ಯಕ್ಷ ಸಿ. ಆಂಜಿನಪ್ಪ ಮಾತನಾಡಿ, ಜಲ್ಲಿ ಕ್ರಷರ್ ಮಾಲೀಕ ಸೋಮಶೇಖರ್ ಅವರು ಕಾನೂನು ಬದ್ಧವಾಗಿ ಅನುಮತಿ ಪಡೆದು ಹಲವಾರು ವರ್ಷಗಳಿಂದ ಜಲ್ಲಿ ಕ್ರಷರ್ ನಡೆಸುತ್ತಿದ್ದು, ಇದರಿಂದ ಮೇಡಿಹಾಳ ಗ್ರಾಮಸ್ಥರಿಗೆ ಯಾವುದೇ ರೀತಿಯ ತೊಂದರೆಯಾಗುತ್ತಿಲ್ಲ. ಕೆಲವರು ಕ್ರಷರ್ ಬೇಡ ಎಂದು ಹೇಳುತ್ತಿದ್ದಾರೆ. ಕ್ರಷರ್ ಗಳನ್ನು ನಿಲ್ಲಿಸಿಬಿಟ್ಟರೆ ನಾವು ಮನೆಗಳನ್ನು ಕಟ್ಟುವುದು ಹೇಗೆ? ಸುಳ್ಳು ದೂರುಗಳ ಬಗ್ಗೆ ಜಿಲ್ಲಾಡಳಿತ ಸೂಕ್ತವಾಗಿ ಕ್ರಮ ತೆಗೆದುಕೊಳ್ಳಲಿ ಎಂದರು.

ಕಿಸಾನ್ ಕಾಂಗ್ರೆಸ್ ತಾಲೂಕು ಅಧ್ಯಕ್ಷ ನಾಗರಾಜುಗೌಡ ಮಾತನಾಡಿ, ಜಲ್ಲಿ ಕ್ರಷರ್ ನಿಂದ ಸಾವಿರಾರು ಜನರು ಕೂಲಿ ಮಾಡಿ ಜೀವನ ನಡೆಸುತ್ತಿದ್ದಾರೆ. ಇದರಿಂದ ಯಾರಿಗೂ ಯಾವುದೇ ರೀತಿಯ ತೊಂದರೆಯಾಗುತ್ತಿಲ್ಲ. ವೈಯಕ್ತಿಕವಾಗಿ ಅಥವಾ ಯಾರಾದ್ರು ಎತ್ತಿಕಟ್ಟಿ ಸುಳ್ಳು ಆರೋಪ ಮಾಡುತ್ತಿರುವುದನ್ನು ನಾವು ಖಂಡಿಸುತ್ತೇವೆ. ಎಂಸ್ಯಾಂಡ್ ಎಲ್ಲರಿಗೂ ಮುಖ್ಯವಾಗಿದೆ. ಕಾನೂನು ನಿಯಮಗಳಂತೆ ಕ್ರಷರ್



ನಡೆಸುತ್ತಿದ್ದಾರೆ. ಯಾರಿಗೂ ಇದರಿಂದ ತೊಂದರೆಯಾಗುತ್ತಿಲ್ಲ. ಕೆಲವರು ವಿನಾಕಾರಣ ಜಲ್ಲಿ ಕ್ರಷರ್ ವಿರುದ್ಧ ಸುಳ್ಳು ಆರೋಪ ಮಾಡುತ್ತಿದ್ದಾರೆ. ಇದು ಸತ್ಯಕ್ಕೆ ದೂರವಾದದ್ದು. ಜಲ್ಲಿ ಕ್ರಷರ್ ನಡೆಸಲು ಅವಕಾಶ ನಡೆಸಿಕೊಡಬೇಕೆಂದು ಮನವಿ ಮಾಡಿದರು.

ನಾಗನಾಳ ಶಂಕರ್ ಮಾತನಾಡಿ, ಕಳೆದ ಹಲವು ವರ್ಷಗಳಿಂದ ನಾಗನಾಳ ಗ್ರಾಮದಲ್ಲಿ ಜಲ್ಲಿ ಕ್ರಷರ್ ನಡೆಯುತ್ತಿದೆ. ನಾಗನಾಳ, ಮೇಡಿಹಾಳ ಮತ್ತು ಧನಮಟ್ನಹಳ್ಳಿ ಗ್ರಾಮಸ್ಥರು ಆ ಜಲ್ಲಿ ಕ್ರಷರ್ ನಲ್ಲಿ ಕೆಲಸ ಮಾಡಿ ಜೀವನ ಸಾಗಿಸುತ್ತಿದ್ದಾರೆ. ಆದರೆ ಮೇಡಿಹಾಳ ಗ್ರಾಮದ ಕೆಲವರು ಹಣದ ಆಸೆಗಾಗಿ ಜಲ್ಲಿ ಕ್ರಷರ್ ವಿರುದ್ಧ ಜಿಲ್ಲಾಧಿಕಾರಿಗೆ ಸುಳ್ಳು ದೂರು ನೀಡಿ ಸೋಮಶೇಖರ್ ಅವರ ಬಳಿ ಹಣ ಕಿತ್ತುಕೊಳ್ಳಲು ಬ್ಲಾಕ್ ಮೇಲ್ ಮಾಡಿ, ಅವರಿಗೆ ಮಾನಸಿಕ ಹಿಂಸೆ ನೀಡಿರುತ್ತಾರೆ. ಅವರು ನೀಡಿರುವ ದೂರು ಸತ್ಯಕ್ಕೆ ದೂರವಾಗಿದೆ. ಜಲ್ಲಿ ಕ್ರಷರ್ ಮಾಲೀಕರು ದೇವಸ್ಥಾನ ಮತ್ತು ಶಾಲೆಗಳಿಗೆ ಸಹಾಯವನ್ನು ಮಾಡಿದ್ದಾರೆ. ಜಲ್ಲಿ ಕ್ರಷರ್‌ನಿಂದ ಹಲವು ಉದ್ಯೋಗಗಳು ಸೃಷ್ಟಿಯಾಗಿದ್ದು, ಗಣಿಗಾರಿಕೆ ಮತ್ತು ಜಲ್ಲಿ ಕ್ರಷರ್ ಯಥಾಸ್ಥಿತಿ ನಡೆಸಲು ಅನುವು ಮಾಡಿಕೊಡಬೇಕೆಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ಗಣಿ ಇಲಾಖೆ ಅಧಿಕಾರಿ ಕೋದಂಡರಾಮಯ್ಯ, ಜಲ್ಲಿ ಕ್ರಷರ್‌ಗಳ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದರು.

ಈ ಸಂದರ್ಭದಲ್ಲಿ ನಾಗನಾಳ ಮುನಿಸ್ವಾಮಿ, ಅಮರನಾಥ್, ಶ್ರೀನಿವಾಸ್, ಲಾರಿ ಮಾಲೀಕ ಚೆಲ್ಲಹಳ್ಳಿ ಗೋಪಾಲ್, ಬಾಬು, ನಾಗನಾಳ ನಾರಾಯಣಸ್ವಾಮಿ, ಮಂಜುನಾಥ್, ಅಮರ್, ಶ್ರೀನಿವಾಸ, ಬೈರೇಗೌಡ, ಸೀತಮ್ಮ, ಪಿಳ್ಳಮ್ಮ, ಅಕ್ಕಯ್ಯಮ್ಮ, ಮುನಿರತ್ನಮ್ಮ, ಶಾರದಮ್ಮ, ಕಮಲಮ್ಮ ಮುಂತಾದವರು ಇದ್ದರು.

# ಸಾಂಘೀಕ ಪ್ರಯತ್ನದಿಂದ ಪಿಯು ಫಲಿತಾಂಶ ಹೆಚ್ಚಿಸಿ



**ಬೀದರ:ಫೆ.12:**ಮಕ್ಕಳ ಶೈಕ್ಷಣಿಕ ದೃಷ್ಟಿಯಿಂದ ಪಿಯು ಶಿಕ್ಷಣ ಅತ್ಯಂತ ಮಹತ್ವದ ಘಟ್ಟವಾಗಿರುತ್ತದೆ.ಕಾರಣ ದ್ವಿತೀಯ ಪಿಯು ಫಲಿತಾಂಶ ಸಾಂಘೀಕ ಪ್ರಯತ್ನದಿಂದ ವೃದ್ಧಿಸಲು ಸಾಧ್ಯ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಖಡಕ್ ವಾರ್ನಿಂಗ್ ಮಾಡಿದರು.

ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸೋಮವಾರ ದ್ವಿತೀಯ ಪಿಯುಸಿ ಫಲಿತಾಂಶ ಸುಧಾರಣೆಗಾಗಿ ಕರೆದ ಜಿಲ್ಲಾ ಸರ್ಕಾರಿ,ಅನುದಾನಿತ ಮತ್ತು ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಬೇರೆ ಜಿಲ್ಲೆಗಳಿಗೆ ಹೋಲಿಸದರೆ ನಮ್ಮ ಜಿಲ್ಲೆಯ ಫಲಿತಾಂಶ ಕ್ಷೀಣಿಸುತ್ತಿದೆ.ವಿನೂತನ ಮಾದರಿಯ ಕೌಶಲ್ಯಗಳನ್ನು ಅಳವಡಿಸಿಕೊಂಡು ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ,ಆಯಾ ವಿಷಯದ ಉಪನ್ಯಾಸಕರಿಗೆ ವಿದ್ಯಾರ್ಥಿಗಳನ್ನು ದತ್ತು ನೀಡಿ ವೈಯಕ್ತಿಕ ಕಾಳಜಿ ವಹಿಸಬೇಕು.ನಿಗದಿತ ಅವಧಿಯಲ್ಲಿ ಪಠ್ಯಕ್ರಮ ಮುಗಿಸಿ ಪರೀಕ್ಷೆ ಭಯಮುಕ್ತ ವಾತಾವರಣ ಸೃಷ್ಟಿಸಿ ಮಕ್ಕಳ –ಪಾಲಕರ ಸಭೆ ಕರೆದು ತಿಳುವಳಿಕೆ ನೀಡಬೇಕು.ಫಲಿತಾಂಶ ಕಡಿಮೆ ಬಂದ ಕಾಲೇಜುಗಳ ಪ್ರಾಚಾರ್ಯರ ಮೇಲೆ ನಿರ್ದಾಕ್ಷಣ್ಯ ಕ್ರಮ ಜರುಗಿಸಲಾಗುವುದು.ಕರ್ತವ್ಯದಲ್ಲಿ ನಿರ್ಲಕ್ಷ ಸಲ್ಲದು.ಸರ್ಕಾರಿ ಪಿಯು ಕಾಲೇಜುಗಳಲ್ಲಿ ದಾಖಲಾತಿ ಹೆಚ್ಚಿಸಲು ಆಂದೋಲನ ಹಮ್ಮಿಕೊಳ್ಳುವುದು ಅಗತ್ಯವಾಗಿದೆ ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ (ಪದವಿ ಪೂರ್ವ)ಚಂದ್ರಕಾಂತ ಶಾಹಾಬಾದಕರ್ ಪ್ರಾಸ್ತಾವಿಕ ಮಾತನಾಡಿದರು.

ಸಭೆಯಲ್ಲಿ ಜಿಲ್ಲಾ ಸರ್ಕಾರಿ,ಅನುದಾನಿತ ಮತ್ತು ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಜರಿದ್ದರು.

'ಪ್ರತಿ ವರ್ಷ ಸರ್ಕಾರಿ,ಅನುದಾನಿತ ಪಿಯು ಕಾಲೇಜುಗಳ ಫಲಿತಾಂಶಕ್ಕಿಂತ ಅನುದಾನರಹಿತ ಕಾಲೇಜುಗಳ ಫಲಿತಾಂಶ ಉತ್ತಮ ರೀತಿಯಲ್ಲಿರುತ್ತದೆ.ಪಿಯು ಫಲಿತಾಂಶ ಹೆಚ್ಚಿಸಲು ಹೆಚ್ಚುವರಿ ತರಗತಿಗಳನ್ನು ನಡೆಸಿ ,ಬದಲಾದ ಪ್ರಶ್ನೆ ಪತ್ರಿಕೆ ಮಾದರಿ ಮಕ್ಕಳಿಗೆ ಮನದಟ್ಟಾಗುವಂತೆ ತಿಳಿ ಹೇಳಬೇಕು.ರಿಸಲ್ಟ್ ಹೆಚ್ಚಿಸಿದವರಿಗೆ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತನಿಂದ ಸನ್ಮಾನಿಸಲಾಗುವುದು.ಕಡಿಮೆ ಬಂದವರ ಮೇಲೆ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗುವುದು.'–ಡಾ.ಗಿರೀಶ ಬದೋಲೆ ಸಿಇಒ ಬೀದರ.

## ನರ್ಸಿಂಗ್ ಕ್ಷೇತ್ರದಲ್ಲಿ ಸಂಶೋಧನೆಗಳ ಪ್ರಮಾಣ ಹೆಚ್ಚಳ: ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ



**ವಿಜಯಪುರ, ಫೆ. 12:** ನರ್ಸಿಂಗ್ ಕ್ಷೇತ್ರದಲ್ಲಿ ಸಂಶೋಧನೆಗಳ ಪ್ರಮಾಣ ಹೆಚ್ಚುತ್ತಿರುವುದರಿಂದ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಲು ಅನುಕೂಲವಾಗುತ್ತಿದೆ ಎಂದು ಬಿ.ಎಲ್.ಡಿ.ಇ ಆಯುರ್ವೇದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಅಶೋಕ ಪಾಟೀಲ ಹೇಳಿದ್ದಾರೆ.ಮಂಗಳವಾರ ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ.ಎಂ. ಪಾಟೀಲ್ ನರ್ಸಿಂಗ್ ಮಹಾವಿದ್ಯಾಲಯದಲ್ಲಿ, ಬಿ.ಎಲ್.ಡಿ.ಇ ಮೆಡಿಕಲ್ ಕಾಲೇಜಿನ ಸಹಯೋಗದೊಂದಿಗೆ ಆಯೋಜಿಸಲಾದ ರಾಜ್ಯಮಟ್ಟದ ಒಂದು ದಿನದ ಕಾರ್ಯಾಗಾರದಲ್ಲಿ ಅವರು ಮುಖ್ಯ ಭಾಷಣ ಮಾಡಿದರು.

ಆಯುರ್ವೇದದಲ್ಲಿ ವಿವರಿಸಿದಂತೆ ರೋಗಿಗೆ ವೈದ್ಯರ ಅವಶ್ಯಕತೆ ಎಷ್ಟು ಮುಖ್ಯವೋ, ಅಷ್ಟೇ ಮಹತ್ವ ನರ್ಸಿಂಗ್ ವೃತ್ತಿಪರರಿಗೂ ಇದೆ. ನರ್ಸಿಂಗ್ ವೃತ್ತಿ ಸಮಾಜದ ಹೆಮ್ಮೆಯಾಗಿದೆ ಎಂದು ಅವರು ಹೇಳಿದರು.ಡಾ. ಎಂ.ಎಂ. ಪಾಟೀಲ ಮಾತನಾಡಿ, ಇತ್ತೀಚಿನ ತಂತ್ರಜ್ಞಾನಗಳ ಬೆಳವಣಿಗೆ ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಗಳನ್ನು ತಂದಿವೆ. ಸಂಶೋಧನೆಯ ಮೂಲಕ ವೈದ್ಯಕೀಯ ಕ್ಷೇತ್ರದಲ್ಲಿ ಜವಾಬ್ದಾರಿಗಳು ಹೆಚ್ಚಾಗಿವೆ. ಈ ಬದಲಾವಣೆಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಸಾಮರ್ಥ್ಯ ನಮ್ಮಲ್ಲಿರಬೇಕು ಎಂದು ಹೇಳಿದರು.

ತುಮಕೂರಿನ ಡಾ. ಪರಮೇಶ, ಬಾಗಲಕೋಟೆಯ ಡಾ. ಶ್ರೀಹರ್ಷ ಹಾಗೂ ವೈದ್ಯಕೀಯ ಕ್ಷೇತ್ರದ ಡಾ. ನಿರ್ಮಲಾ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಸಂಶೋಧನೆಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ಡಾ. ಶಾಲ್ಮನ್ ಚೋಪಡೆ, ಪ್ರೊ. ಸುಚಿತ್ರಾ ರಾಟಿ, ಬಶೀರ ಅಹ್ಮದ್, ಕವಿತಾ ಕೆ., ಅಮರನಾಥ್, ಸೌಜನ್ಯ ಸಂಕಪ್ಪ, ಅಪ್ಪನಗೌಡ ಪಾಟೀಲ, ಡಾ. ಅಮಿತಕುಮಾರ ಬಿರಾದಾರ, ಭಾಗ್ಯಶ್ರೀ ಬಾಗೇವಾಡಿ, ಡಾ. ಸತೀಶ ನಡಗಡ್ಡಿ, ಕಾಲೇಜಿನ ಬೋಧಕ ಮತ್ತು ಬೋಧಕರ ಹೊರತಾದ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರಾಜ್ಯದ ನಾನಾ ಜಿಲ್ಲೆಗಳಿಂದ ಆಗಮಿಸಿದ್ದ ಸುಮಾರು 120 ಮಂದಿ ಪ್ರತಿನಿಧಿಗಳು ಈ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

## ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ:ದೊಡ್ಡಮನಿ



**ಸೈದಾಪುರ;ಫೆ.12:**ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಬ್ದಾರಿಯಾಗಿದೆ ಎಂದು ಮುಖ್ಯಗುರು ಯಂಕಪ್ಪ ದೊಡ್ಡಮನಿ ಅಭಿಪ್ರಾಯಪಟ್ಟರು.

ಪಟ್ಟಣದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇಕೋ ಕ್ಲಬ್ ವತಿಯಿಂದ ಹಮ್ಮಿಕೊಂಡ ಪರಿಸರ ಸಂರಕ್ಷಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಉತ್ತಮ ಆರೋಗ್ಯಕ್ಕೆ ಪರಿಸರ ಅತಿ ಮಹತ್ವದ್ದಾಗಿದೆ. ವಿದ್ಯಾರ್ಥಿಗಳು ಚಿಕ್ಕಂದಿನಿಂದಲೇ ಪರಿಸರದ ಬಗ್ಗೆ ಕಾಳಜಿ ವಹಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಬದಲಾದ ಜೀವನ ಪದ್ಧತಿಯಿಂದ ಪರಿಸರದಲ್ಲಿ ವಿವಿಧ ರೀತಿಯ ಮಾಲಿನ್ಯವನ್ನು ಕಾಣುವಂತಾಗಿದೆ. ಈ ದಿಸೆಯಲ್ಲಿ ಸರಕಾರ ವಿವಿಧ ಕಾರ್ಯಕ್ರಗಳ ಮೂಲಕ ಪರಸರದ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದೆ. ಕಾರ್ಯಕ್ರಮದಲ್ಲಿ ಅತಿಥಿಗಳು ನೀಡುವ ಸಲಹೆ ಸೂಚನೆಗಳನ್ನು ಪಾಲನೆ ಮಾಡುವ ಮೂಲಕ ಪರಿಸರ ರಂಕ್ಷಣೆ ಮಾಡಬೇಕು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ವಿದ್ಯಾ ವರ್ಧಕ ಪ್ರೌಢ ಶಾಲೆಯ ವಿಜ್ಞಾನ ಶಿಕ್ಷಕ ರಾಚಯ್ಯ ಸ್ವಾಮಿ ಬಾಡಿಯಾಲ, ಅಜೀಮ ಪ್ರೇಮಜಿ ಫೌಂಡೇಶನ ಶಿಕ್ಷಕ ಕಲಿಕೆ ಕೇಂದ್ರದ ಸಂಯೋಜಕ ಮಲ್ಲೇಶ.ಎನ್.ವಗ್ಗರ ಮಾತನಾಡಿದರು. ಶಿಕ್ಷಕರಾದ ದೀಪಿಕಾ, ಬಲರಾಮ, ಶ್ರೀದೇವಿ, ಗೀತಾ, ರತ್ನಮ್ಮ, ವಿದ್ಯಾರ್ಥಿಗಳು ಸೇರಿದಂತೆ ಇತರರಿದ್ದರು. ಶಿಕ್ಷಕಿ ಶಾಂತಮ್ಮ ಸ್ವಾಗತಿಸಿದರು. ದೈಹಿಕ ಶಿಕ್ಷಕ ಮಹಿಪಾಲರೆಡ್ಡಿ ನಿರೂಪಿಸಿದರು. ಶಿವಕಾಂತಮ್ಮ ವಂದಿಸಿದರು.

## ದೆಹಲಿ ಗಾಳಿ ಗುಣಮಟ್ಟ ಕಳಪೆ

**ನವದೆಹಲಿ, ಫೆ.12:–** ಆರು ದಿನಗಳ ಸಹಜ ಉಸಿರಾಟದ ಗಾಳಿಯ ನಂತರ ರಾಷ್ಟ್ರರಾಜಧಾನಿ ನಗರದ ಗಾಳಿಯ ಗುಣಮಟ್ಟವು ಅತ್ಯಂತ ಕಳಪೆ ವರ್ಗಕ್ಕೆ ಕುಸಿದಿದೆ.

ವಾಯು ಗುಣಮಟ್ಟ ಸೂಚ್ಯಂಕ (ಎಕ್ಯೂಐ) ಸಂಜೆ 4 ಗಂಟೆಗೆ 305 ರಷ್ಟಿತ್ತು. ಇದು ಮಂಗಳವಾರ ಅದೇ ಸಮಯದಲ್ಲಿ 271 (ಕಳಪೆ) ನಿಂದ ಹೆಚ್ಚಾಗಿದೆ. ಕೊನೆಯ ಬಾರಿಗೆ ನಗರದಲ್ಲಿ ಅತ್ಯಂತ ಕಳಪೆ ಗಾಳಿಯನ್ನು ದಾಖಲಿಸಿದ್ದು ಫೆಬ್ರವರಿ 4ರಂದು, ಆಗ ಎಕ್ಯೂಐ 339 ಆಗಿತ್ತು.

ಅಂದಿನಿಂದ, ಎಕ್ಯೂಐ ಕಳಪೆ ಮತ್ತು ಮಧ್ಯಮ ನಡುವೆ ಏರಿಳಿತಗೊಂಡಿದೆ. ಕಳೆದ ವಾರದಲ್ಲಿ ಓಝೋನ್ ಮಟ್ಟವು ತುಲನಾತ್ಮಕವಾಗಿ ಕಡಿಮೆಯಾಗಿದೆ. ಬುಧವಾರ ಗಾಳಿ ಇದ್ದರೂ, ಮಬ್ಬು ಮತ್ತು ಗಾಳಿಯ ದಿಕ್ಕನ್ನು ಬದಲಾಯಿಸುವುದು ಗಾಳಿಯ ಗುಣಮಟ್ಟದಲ್ಲಿ ಕುಸಿತಕ್ಕೆ ಕಾರಣವಾಗಿರಬಹುದು ಎಂದು ಹವಾಮಾನ ವಿಶ್ಲೇಷಕರು ಹೇಳಿದ್ದಾರೆ.

ಫೆಬ್ರವರಿ 12 ರಿಂದ 14 ರವರೆಗೆ ಗಾಳಿಯ ಗುಣಮಟ್ಟವು ಕಳಪೆ ವರ್ಗದಲ್ಲಿ ಉಳಿಯುವ ಸಾಧ್ಯತೆಯಿದೆ. ಮುಂದಿನ ಆರು ದಿನಗಳ ದೃಷ್ಟಿಕೋನವು ಇದೇ ರೀತಿಯ ಪರಿಸ್ಥಿತಿಗಳನ್ನು ಸೂಚಿಸುತ್ತದೆ" ಎಂದು ಇಂಡಿಯನ್ ಇನ್ ಸ್ಟಿಟ್ಯೂಟ್ ಆಫ್ ಟ್ರಾಪಿಕಲ್ ಮೆಟಿರೋಲಜಿ (ಐಐಟಿಎಂ) ಆರಂಭಿಕ ಎಚ್ಚರಿಕೆ ವ್ಯವಸ್ಥೆ ತಿಳಿಸಿದೆ.

ಫೆಬ್ರವರಿ 17 ಅಥವಾ 18 ರ ಸುಮಾರಿಗೆ ಬ್ಯಾಕ್–ಟು–ಬ್ಯಾಕ್ ಪಾಶ್ಚಿಮಾತ್ಯ ಅಡಚಣೆಗಳು ಈ ಪ್ರದೇಶದ ಮೇಲೆ ಪ್ರಭಾವ ಬೀರಬಹುದು ಎಂದು ಹವಾಮಾನ ವಿಶ್ಲೇಷಕರು ಹೇಳಿದ್ದಾರೆ. ಫೆಬ್ರವರಿ 13ರಂದು ಪಾಶ್ಚಿಮಾತ್ಯ ಅಡಚಣೆಯು ಮುಖ್ಯವಾಗಿ ಬೆಟ್ಟಗಳ ಮೇಲೆ ಪರಿಣಾಮ ಬೀರುತ್ತದೆ. ಫೆಬ್ರವರಿ 16 ರ ರಾತ್ರಿ ಮತ್ತೊಂದು ಅಡಚಣೆಯು ಹರಿಯಾಣ, ದೆಹಲಿ, ರಾಜಸ್ಥಾನ, ಮಧ್ಯಪ್ರದೇಶ ಮತ್ತು ಉತ್ತರ ಪ್ರದೇಶದ ಕೆಲವು ಭಾಗಗಳಲ್ಲಿ ಚದುರಿದ ಮಳೆಯನ್ನು ತರಬಹುದು, ಏಕೆಂದರೆ ಪಶ್ಚಿಮ ರಾಜಸ್ಥಾನದ ಮೇಲೆ ಚಂಡಮಾರುತದ ಪರಿಚಲನೆ ಮತ್ತು ದೆಹಲಿಯಿಂದ ಗುಜರಾತ್ ವರೆಗೆ ವಿಸ್ತರಿಸಿರುವ ಕುಳಿ ಮತ್ತು ಅರೇಬಿಯನ್ ಸಮುದ್ರದಿಂದ ತೇವಾಂಶದ ಒಳಹರಿವು ಬರಲಿದೆ. ಹಗುರ, ಹಾದುಹೋಗುವ ಮಳೆ ಸಾಧ್ಯತೆಯಿದೆ. ಆದರೆ ವ್ಯಾಪಕ ಅಥವಾ ದೀರ್ಘಕಾಲದ ಮಳೆ ಅಸಂಭವವಾಗಿದೆ" ಎಂದು ಸ್ಕೈಮೆಟ್ ನ ಮಹೇಶ್ ಪಲಾವತ್ ಹೇಳಿದರು. ಬುಧವಾರ, ಗರಿಷ್ಠ ತಾಪಮಾನವು 27.5 ಡಿಗ್ರಿ ಸೆಲ್ಸಿಯಸ್ ಆಗಿತ್ತು. ಇದು ಒಂದು ದಿನದ ಹಿಂದಿನ 28.6 ಡಿಗ್ರಿ ಸೆಲ್ಸಿಯಸ್ ಗೆ ಹೋಲಿಸಿದರೆ ಸಾಮಾನ್ಯಕ್ಕಿಂತ ನಾಲ್ಕು ಡಿಗ್ರಿ ಹೆಚ್ಚಾಗಿದೆ. ಕನಿಷ್ಠ 13.2 ಡಿಗ್ರಿ ಸೆಲ್ಸಿಯಸ್ ಆಗಿದ್ದು, ಸಾಮಾನ್ಯಕ್ಕಿಂತ ಮೂರು ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿದೆ. ಹಿಂದಿನ ದಿನ 9.2 ಡಿಗ್ರಿ ಸೆಲ್ಸಿಯಸ್ ನಿಂದ ಹೆಚ್ಚಾಗಿದೆ.ಇಂದು ಗರಿಷ್ಠ ಮತ್ತು ಕನಿಷ್ಠ ತಾಪಮಾನವು ಕ್ರಮವಾಗಿ 25–27 ಡಿಗ್ರಿ ಸೆಲ್ಸಿಯಸ್ ಮತ್ತು 11–13 ಡಿಗ್ರಿ ಸೆಲ್ಸಿಯಸ್ ಆಸುಪಾಸಿನಲ್ಲಿರುತ್ತದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ನಿರೀಕ್ಷಿಸಿದೆ. ಏತನ್ಮಧ್ಯೆ, ವಾಯು ಗುಣಮಟ್ಟ ನಿರ್ವಹಣಾ ಆಯೋಗ (ಸಿಎಕ್ಯೂಎಂ) ರಾಷ್ಟ್ರೀಯ ರಾಜಧಾನಿ ಪ್ರದೇಶದಾದ್ಯಂತ (ಎನ್ ಸಿಆರ್) ಯಾಂತ್ರೀಕೃತ ರಸ್ತೆ ಗುಡಿಸುವಿಕೆಗೆ ಏಕರೂಪದ ತಾಂತ್ರಿಕ ಮತ್ತು ಕಾರ್ಯಾ ಚರಣೆಯ ಮಾನದಂಡಗಳನ್ನು ಕಡ್ಡಾಯಗೊಳಿಸಿದೆ.ಪಿಎಂ 10 ಮತ್ತು ಪಿಎಂ 2.5 ಮಟ್ಟಗಳಿಗೆ ಧೂಳಿನ ಗಮನಾರ್ಹ ಕೊಡುಗೆಯನ್ನು ಉಲ್ಲೇಖಿಸಿದ ಆಯೋಗವು, ಅಸಮಂಜಸ ಮತ್ತು ಅಸಮರ್ಪಕ ರಸ್ತೆ ಗುಡಿಸುವಿಕೆಯು ಮಾಲಿನ್ಯವನ್ನು ಉಲ್ಬಣಗೊಳಿಸುತ್ತದೆ ಎಂದು ಹೇಳಿದೆ. ಹೊಸ ಮಾರ್ಗಸೂಚಿಗಳು ಅಳೆಯಬಹುದಾದ ಧೂಳಿನ ಕಡಿತವನ್ನು ಖಚಿತಪಡಿಸಿಕೊಳ್ಳಲು ರಸ್ತೆ ಅಗಲದ ಆಧಾರದ ಮೇಲೆ ಯಾಂತ್ರೀಕೃತ ರಸ್ತೆ ಗುಡಿಸುವ ಯಂತ್ರಗಳನ್ನು (ಎಂಆರ್ ಎಸ್ಎಂ) ನಿಯೋಜಿಸುವುದನ್ನು ಪ್ರಮಾಣೀಕರಿಸುತ್ತವೆ. ಎನ್ ಸಿಆರ್ ನಲ್ಲಿನ ಎಲ್ಲಾ ರಸ್ತೆ ಮಾಲೀಕತ್ವ ಮತ್ತು ನಿರ್ವಹಣಾ ಏಜೆನ್ಸಿಗಳಿಗೆ ಈ ನಿಯಮಗಳು ಅನ್ವಯಿಸುತ್ತವೆ.

# ಕೃಷಿ ವಿಶ್ವವಿದ್ಯಾಲಯಗಳು ರೈತರ ದೇವಾಲಯಗಳಿದಂತೆ ವಿಶ್ವವಿದ್ಯಾಲಯದ ವಿಜ್ಞಾನಿ ರೈತನ ಯಶಸ್ಸಿಗೆ ಶ್ರಮಿಸಿದಾಗ ಮಾತ್ರ ಸಾರ್ಥಕತೆ ದೊರೆಯುತ್ತದೆ: ಡಾ.ಎ.ಆರ್ ಕುರುಬರ







ಧೈರ್ಯದ ದಾರಿ

**ಮಾನ್ವಿ,ಫೆ.12–** ಪಟ್ಟಣದ ಧ್ಯಾನ ಮಂದಿರದ ಆವರಣದಲ್ಲಿ ಕಲ್ಮಠ ಗಾರಿಗೆ ಜಾತ್ರೆ ಅಂಗವಾಗಿ ಕೃಷಿ ಇಲಾಖೆ, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ರಾಜ್ಯ ರೈತ ಸಂಘ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾ ಸಭಾ ತಾಲೂಕು ಘಟಕ ಮಾಧ್ಯಮ ಸಮಿತಿ ವತಿಯಿಂದ ಹಮ್ಮಿಕೊಂಡ ಜಿಲ್ಲಾ ಮಟ್ಟದ ರೈತ ಸಮಾವೇಶವನ್ನು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ.ಎ.ಆರ್ ಕುರುಬರ ಉದ್ಘಾಟಿಸಿ ಮಾತನಾಡಿ ದೇಶದಲ್ಲಿನ 140 ಕೋಟಿ ಜನರು ನಿತ್ಯದ ಆಹಾರಕ್ಕಾಗಿ ರೈತನನ್ನೇ ಅವಲಂಭಿಸಿದ್ದಾರೆ. ಅದ್ದರಿಂದ ಬದುಕುವುದಕ್ಕೆ ಅಗತ್ಯವಿರುವ ಅನ್ನವನ್ನು ನೀಡುವ ರೈತನನ್ನು ,ನಾವು ದೇವರ ಸ್ವರೂಪದಂತೆ ನಿತ್ಯ ಸ್ಮರಿಸಿಕೊಳ್ಳಬೇಕು.ಅದ್ದರೆ ನಮ್ಮಗೆ ಅಗತ್ಯ ವಿರುವ ಎಲ್ಲಾವನ್ನು ನೀಡುವ ರೈತ ಇಂದು ,ಸಂ ಕಷ್ಟದ ಪರಿಸ್ಥಿತಿಯಂದ ಹೊರಬರಬೇಕಾದರೆ ಸಾಧ ನೆ ತೋರಿದ ಯಶಸ್ವಿ ರೈತರ ಜಮೀನುಗಳಲ್ಲಿನ ಕೃಷಿ ಪದ್ದತಿಯನ್ನು ಕುಟುಂಬದ ಜೋತೆ ಭೇಟಿ ನೀಡಿ ತಮ್ಮ ಜಮೀನುಗಳಲ್ಲಿಯು ಕೂಡ ಉತ್ತಮ ಕೃಷಿ ಪದ್ದತಿಯನ್ನು ಅಳವಡಿಸಿಕೊಂಡಾಗ ಮಾತ್ರ ಕೃಷಿಯಲ್ಲಿ ಹೆಚ್ಚಿನ ಯಶಸ್ಸನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ. ಕೃಷಿ ವಿಶ್ವವಿದ್ಯಾಲಯಗಳು ರೈತರ ದೇವಾಲಯಗಳಿದಂತೆ ವಿಶ್ವವಿದ್ಯಾಲಯದ ವಿಜ್ಞಾನಿ ರೈತನ ಯಶಸ್ಸಿಗೆ ಶ್ರಮಿಸಿದಾಗ ಮಾತ್ರ ಸಾರ್ಥಕತೆ ದೊರೆಯುತ್ತದೆ. ರೈತರು ಕೇವಲ ಮಳೆಯನ್ನು ಅಶ್ರಯಿಸಿ ಬೆಳೆಯನ್ನು ಬೆಳೆದಲ್ಲಿ ಕೃಷಿ ಲಾಭದಾಯಕವಾಗುವುದಿಲ್ಲ ವಿವಿಧ ಬೆಳೆ ಪದ್ದತಿಗಳನ್ನು ತಮ್ಮ ಜಮೀನಿನಲ್ಲಿ ಅಳವಡಿಸಿಕೊಂಡು ನಿಶ್ಚಿತ ಅದಾಯ ವನ್ನು ಪಡೆದು ಕೃಷಿಯನ್ನು ಲಾಭದಾಯವಾಗಿಸಿಕೊ ಳ್ಳಬೇಕು. ಈ ನಿಟ್ಟಿನಲ್ಲಿ ರಾಯಚೂರು ಕೃಷಿ ವಿಶ್ವವಿದ್ಯಾಲಯದಿಂದ ಜಿಲ್ಲೆಯ 200 ಎಕರೆ ಭತ್ತದ ಬೆಳೆ ಪ್ರದೇಶದಲ್ಲಿ ಭತ್ತದ ನಂತರ ಎಳ್ಳು,ಸಾಸಿವೆ ಬೆಳೆ ಪದ್ದತಿಯನ್ನು ರೈತರಿಗೆ ಪರಿಚಯಿಸಿದ್ದು ಕಡಿಮೆ ಕೃಷಿ ವೆಚ್ಚದಲ್ಲಿ ಹೆಚ್ಚಿನ ಲಾಭವನ್ನು ಪಡೆಯುತ್ತಿದ್ದಾರೆ. ಭಾರತ ಸರ್ಕಾರವು ತಾಳೆ ಬೆಳೆಗೆ ನಿಶ್ಚಿತ ಬೆಲೆಯನ್ನು ನಿಗದಿ ಪಡಿಸಿರುವುದರಿಂದ ರೈತರು ತಾಳೆ ಬೆಳೆಯನ್ನು ಬೆಳೆಯುಬಹುದು. ಉತ್ತಮು ಆರೋಗ್ಯವನ್ನು ಪಡೆಯಬೇಕಾದಲ್ಲಿ ಭೂಮಿಯ ಆರೋಗ್ಯವನ್ನು ನಾವು ಕಾಪಡಿಕೊಳ್ಳಬೇಕಾಗಿದೆ ಹಾಗೂ ಆರೋಗ್ಯಕ್ಕೆ ಪೂರಕವಾದ ಆಹಾರವನ್ನು ನಾವು ಉತ್ಪದನೆ ಮಾಡಿಕೋಳ್ಳಬೇಕಾಗಿದೆ ಎಂದು ತಿಳಿಸಿದರು.

ಕೃಷಿ ವಸ್ತು ಪ್ರದರ್ಶನ ಮಳಿಗೆಗಳನ್ನು ಉದ್ಘಾಟಿಸಿ ಜಿಲ್ಲಾ ಕೃಷಿ ಜಂಟಿ ನಿರ್ದೇಶಕರಾದ ಪ್ರಕಾಶ.ಆರ್. ಚೌಹಾಣ್ ಮಾತನಾಡಿ ಸರ್ಕಾರವು ಕೃಷಿ ಇಲಾಖೆ ಯ ಮೂಲಕ ರೈತರಿಗೆ ಕೃಷಿಗೆ ಪೂರಕವಾದ ಎಲ್ಲಾ ಮಾಹಿತಿ ಸೇರಿದಂತೆ ಕೃಷಿ ಪರಿಕರಗಳನ್ನು ಕೂಡ ಸಹಾಯಧನದ ಮೂಲಕ ನೀಡುತ್ತಿದ್ದು ರೈತರು ಕೃಷಿ ಇಲಾಖೆಯು ಯೋಜನೆಗಳನ್ನು ಸದುಪ ಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತರಾಧ್ಯ ಶಿವಾಚಾ ರ್ಯ ಮಹಾಸ್ವಾಮಿಗಳು ವಹಿಸಿ ಮಾತನಾಡಿ ಕಲ್ಮಠ ಗಾರಿಗೆ ಜಾತ್ರೆ ನಿಮಿತ್ಯವಾಗಿಟ್ಟು ಕೊಂಡು ಜಿಲ್ಲೆಯ ರೈತರಿಗೆ ಅಗತ್ಯ ಅಧುನಿಕ ಕೃಷಿಯ ಕುರಿತು ಮಾಹಿತಿಯನ್ನು ನೀಡುವ ಉದ್ದೇಶದಿಂದ ಜಿಲ್ಲಾ ಮಟ್ಟದ ರೈತ ಸಮಾವೇಶವನ್ನು ಅಯೋಜಿಸಲಾಗಿದೆ ಎಂದು ತಿಳಿಸಿದರು.

ದಿವ್ಯಸಾನಿಧ್ಯವನ್ನು ಚೀಕಲಪರ್ವಿ ಶ್ರೀ ರುದ್ರಮುನೀ ಶ್ವರ ಮಠದ ಶ್ರೀ ಸದಾಶಿವಮಹಾಸ್ವಾಮಿಗಳು ವಹಿಸಿದರು. ಕಲ್ಮಠ ಶ್ರೀ ವಿರೂಪಾಕ್ಷೇಶ್ವರ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ವತಿಯಿಂದ ಹಮ್ಮಿಕೊಂಡ ಉಚಿತ ಆರೋಗ್ಯ ಶಿಬಿರವನ್ನು ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಚಾಲನೆ ನೀಡಿದರು ಹಾಗೂ ಕಂದಾಯ ಇಲಾಖೆಯಿಂದ ರೈತರಿಗೆ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಗೌರವಾಧ್ಯಕ್ಷರಾದ ಚಾಮರಸ ಮಾಲಿ ಪಾಟೀಲ್ ಬೆಟ್ಟದೂರು ವಹಿಸಿಕೊಂಡು ಮಾತನಾಡಿ ರೈತರು ಸಂಪ್ರಾದಾಯಿಕ ಬೆಳೆ ಪದ್ದತಿಯ ಜೊತೆಗೆ ಗ್ಯಾರಂಟಿ ಅದಾಯವನ್ನು ನೀಡುವ ಕೃಷಿ ಪದ್ದತಿಗಳನ್ನು ಅಳವಡಿಸಿಕೊಂಡಾಗ ಮಾತ್ರ ರೈತರಿಗೆ ಉತ್ತಮ ಅದಾಯ ದೊರೆಯುತ್ತದೆ ಕೃಷಿಯಲ್ಲಿ ನಷ್ಟವಾಗುವುದಿಲ್ಲ ಹೆಚ್ಚು ಸಾವಯುವ ಹಾಗೂ ನೈಸರ್ಗಿಕ ಕೃಷಿ ಪದ್ದತಿಯನ್ನು ಅವಲಂಬಿಸುವುದರಿಂದ ನಿರಂತರವಾಗಿ ಉತ್ತಮ ಗುಣಮಟ್ಟದ ಕೃಷಿ ಉತ್ಪನ್ನಗಳನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಮಂಡ್ಯದ ಸಾವಯವ ರೈತ ಕೃಷ್ಣಪ್ಪ ಬೆನ್ನೂರು ಪಂಚತರಂಗಿಣಿ ಐದು ಹಂತಗಳ ಕೃಷಿ ಪದ್ದತಿ ಕುರಿತು ಮಾಹಿತಿ



ನೀಡಿದರು. ಹಿರಿಯ ಪರಿಸರ ಅಂಕಣಕರಾರದ ಅಮರೇಗೌಡ ಗೋನಾವರ ತುಂಗಭದ್ರ ಜಲಾಶಯ ಹಾಗೂ ಕೃಷಿಯಲ್ಲಿ ನೀರಿನ ಬಳಕೆ ಕುರಿತು ಉಪನ್ಯಾಸ ನೀಡಿದರು.



ಕೃ.ವಿ.ವಿ.ರಾಯಚೂರು ಕೃಷಿ ವಿಜ್ಞಾನಿಗಳಾದ ಡಾ.ಪ್ರಭುರಾಜ್.ಎ, ಇ–ಸ್ಯಾಪ್ ತಂತ್ರಜ್ಞಾನ ಕುರಿತು ರೈತರಿಗೆ ಮಾಹಿತಿಯನ್ನು ನೀಡಿದರು. ಕೃ.ವಿ.ವಿ.ರಾಯಚೂರು ಸಾವಯವ ಕೃಷಿ ವಿಭಾಗದ ಮುಖ್ಯಸ್ಥರಾದ ಡಾ.ಎಂ.ಎ. ಬಸವಣ್ಣೆಪ್ಪ ಸಾವಯವ ಕೃಷಿ ಹಾಗೂ ಮನೆಯಂಗಳದಲ್ಲಿನ ತೋಟ ಕುರಿತು ಉಪನ್ಯಾಸ ನೀಡಿದರು. ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ.ತಿಮ್ಮಣ್ಣ, ಉಪನ್ಯಾಸಕರಾದ ಡಾಬಸವಪ್ರಸಾದ್ .ಬಿ. ಪಕ್ಷಿ ಪ್ರೇಮಿ ಸಲ್ಲಾವುದಿನ್ನ್ ಉಪನ್ಯಾಸ ನೀಡಿದರು. ಜಿಲ್ಲೆಯ ವಿವಿಧ ತಾಲೂಕುಗಳ ಕೃಷಿ

ಕ್ಷೇತ್ರದಲ್ಲಿನ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಕಲ್ಮಠ ಶ್ರೀ ವಿರೂಪಾಕ್ಷೇಶ್ವರ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ಪ್ರಾಚಾರ್ಯರಾದ ಡಾ.ಜೀವನೇಶ್ವರಯ್ಯ, ಟಿ.ಎ.ಪಿ.ಸಿ.ಎಂ.ಸಿ. ಅಧ್ಯಕ್ಷರಾದ ತಿಮ್ಮರೆಡ್ಡಿ ಭೋಗವಾತಿ, ತಾ.ಸಹಾಯಕ ಕೃಷಿ ನಿರ್ದೇಶಕರಾದ ಗುರುನಾಥ ಭೂಸನೂರ,ಅ.ಭಾ.ವೀ.ಲಿಂ.ಮಹಾಸಭಾ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ ಮಿರ್ಜಾಪುರ್,ತಾ,ಅಧ್ಯಕ್ಷರಾದ ಅರುಣಚಂದಾ,ರಾಜ್ಯ ಕಾರ್ಯಕಾರಣಿ ಸದಸ್ಯರಾದ ಸಿದ್ದಲಿಂಗಪ್ಪ ವಕೀಲರು, ತಾ.ವೀರಶೈವಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹರ ಪಾಟೀಲ್,ಗೌ.ಅಧ್ಯಕ್ಷರಾದ ಶ್ರೀಧರಸ್ವಾಮಿ, ಹಿರಿಯ ವರದಿಗಾರರಾದ ಬಸವರಾಜ ಭೋಗವತಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಕಾರ್ಯದರ್ಶಿ ಸೂಗೂರಯ್ಯ ಆರ್.ಎಸ್.ಮಠ, ಜಿಲ್ಲಾಧ್ಯಕ್ಷರಾದ ಪ್ರಭಾಕರ್ ಪಾಟೀಲ್, ಜಿಲ್ಲಾ ಕಾರ್ಯದರ್ಸೀ ಬಸವನಗೌಡ ಮಲ್ಲಿನ ಮಡಗು, ಜಿಲ್ಲಾ ಪ್ರ.ಕಾರ್ಯದರ್ಶಿ ಲಿಂಗರೆಡ್ಡಿ ಪಾಟೀಲ್ , ತಾ.ಅಧ್ಯಕ್ಷರಾದ ಸಿದ್ದಯ್ಯಸ್ವಾಮಿ,ತಾ.ಗೌ.ಅಧ್ಯಕ್ಷರಾದ ಚಾಮರಸ ಪಾಟೀಲ್, ತಾ.ಕಾರ್ಯದರ್ಶಿ ಅಮರೇಶ ಅಲ್ದಾಳ್ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳ ರೈತರು ಭಾಗವಹಿಸಿದರು. ಮಯೂರಿ ನೃತ್ಯ ಕಲಾ ತಂಡದ ವಿದ್ಯಾರ್ಥಿಗಳಿಂದ ನೃತ್ಯ ಪ್ರದರ್ಶನ ನಡೆಯಿತು.

ಕೃ.ವಿ.ವಿ.ರಾಯಚೂರು,ಕೃಷಿ ಇಲಾಖೆ, ಬಸವ ಕೈಗಾರಿಕ ಸಂಸ್ಥೆ,ಸ್ಟಪಿಂಗ್ ಸ್ಟೋನ್ ಶಿಕ್ಷಣ ಸಂಸ್ಥೆ, ಸೇರಿದಂತೆ ತಾಲೂಕಿನ ವಿವಿಧ ಕೃಷಿ ಪರಿಕರಗಳ ತಾಯಾರಿಕ ಸಂಸ್ಥೆಗಳವರಿಂದ ನಡೆದ ಕೃಷಿ ವಸ್ತು ಪ್ರದರ್ಶನ ರೈತರ ಗಮನ ಸೇಳೆಯಿತು.

# ನಾಲ್ವರು ಭ್ರಷ್ಟರು ಲೋಕಾ ಬಲೆಗೆ,ಅಕ್ರಮ ಆಸ್ತಿ ಪತ್ತೆ



**ಬೆಂಗಳೂರು,ಫೆ.12–**ಬೆಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ದಾವಣಗೆರೆಯಲ್ಲಿ ಏಕಕಾಲಕ್ಕೆ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳು ನಾಲ್ವರು ಭ್ರಷ್ಟ ಅಧಿಕಾರಿಗಳನ್ನು ಬಲೆಗೆ ಕೆಡವಿ ಕೋಟ್ಯಂತರ ಮೌಲ್ಯದ ಅಕ್ರಮ ಆಸ್ತಿಪಾಸ್ತಿ ಪತ್ತೆಹಚ್ಚಿದ್ದಾರೆ.ಬೆಂಗಳೂರು ಗ್ರಾಮಾಂತರದ ಕರ್ನಾಟಕ ರೆಸಿಡೆನ್ಸಿಯಲ್ ಎಜುಕೇಷನಲ್ ಇನ್ಸಿಟ್ಯೂಷನ್ ಸೊಸೈಟಿ ಸೂಪರಟೆಂಡೆಂಟ್ ಇಂಜಿನಿಯರ್ ಹೆಚ್ ಎಂ ಜನಾರ್ದನ್,ಲೋಕೋಪಯೋಗಿ ಇಲಾಖೆಯ ರಾಷ್ಟೀಯ ಹೆದ್ದಾರಿ ಮುಖ್ಯ ಇಂಜಿನಿಯರ್ ಪುರುಷೋತ್ತಮ ದಾಸ್ ಹೆಗಡೆ,ದಾವಣಗೆರೆಯ ಬೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಅರ್ಜುನ ಆರ್.ಹೆಚ್ ಹಾಗೂ ಧಾರವಾಡದ ಭೂದಾಖಲೆಗಳ ಸರ್ವೇಯರ್ ಸೋಮಲಿಂಗಪ್ಪ ಲೋಕಾಯುಕ್ತ ಬಲೆಗೆ ಬಿದ್ದ ಅಧಿಕಾರಿಗಳಾಗಿದ್ದಾರೆ.

ಲೋಕೋಪಯೋಗಿ ಮುಖ್ಯ ಇಂಜಿನಿಯರ್ ಪುರುಷೋತ್ತಮ ದಾಸ್ ಕಚೇರಿ ಮನೆ ಸೇರಿ 11 ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಹೆಚ್ ಎಂ ಜನಾರ್ದನ್ ಅವರ ಕಚೇರಿ ಮನೆ ಮೇಲೆ ಬೆಳಿಗ್ಗೆಯಿಂದ ದಾಳಿ ನಡೆಸಿ ಅಕ್ರಮ ಆಸ್ತಿ ಪಾಸ್ತಿ ಪತ್ತೆಹಚ್ಚಿದ್ದಾರೆ.

ಮೈಸೂರಿನಲ್ಲಿ 5 ಕಡೆ, ಬೆಂಗಳೂರಿನಲ್ಲಿ 6 ಕಡೆ ದಾಳಿ ನಡೆಸಿದ್ದು, ಮಹತ್ವದ ದಾಖಲೆಗಳಿಗಾಗಿ ಶೋಧ ನಡೆಸಿದ್ದಾರೆ.

ಬೆಸ್ಕಾಂ ಇಂಜಿನಿಯರ್ ಆರ್.ಹೆಚ್ ಅರ್ಜುನ್ ಅವರ ಮನೆ ಹಾಗೂ ಕಚೇರಿ ಮೇಲೂ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿದೆ.ದಾವಣಗೆರೆಯ ಬೆಸ್ಕಾಂನ ಸಿವಿಲ್ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರ್ಜುನ್ ವಿರುದ್ಧ ಆದಾಯ ಮೀರಿ ಅಪಾರ ಪ್ರಮಾಣದ ಆಸ್ತಿ ಗಳಿಸಿರುವ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆ ಲೋಕಾಯುಕ್ತ ಎಸ್ಪಿ ಎಂಎಸ್ ಕೌಲಾಪುರೆ ನೇತ್ರತ್ವದ ತಂಡ ದಾಳಿ ನಡೆಸಿದೆ.ಅರ್ಜುನ್ ವಾಸವಿದ್ದ ದಾವಣಗೆರೆ ನಗರದ ನಿಟ್ಟುವಳ್ಳಿನಲ್ಲಿ ರೂಮ್, ಕಚೇರಿ ಹಾಗೂ ಶಿವಮೊಗ್ಗದ ಮನೆಯ ಮೇಲೆ ಏಕ ಕಾಲಕ್ಕೆ ದಾಳಿ ನಡೆಸಲಾಗಿದೆ. ಶಿವಮೊಗ್ಗದ ಮನೆಯಲ್ಲಿ ಆಸ್ತಿ ಪತ್ರ ಹಾಗೂ ಚಿನ್ನ ಬೆಳ್ಳಿ ಪತ್ತೆಯಾಗಿದ್ದು, ಇನ್ನಷ್ಟು ಮಹತ್ವದ ದಾಖಲೆಗಳನ್ನ ಪತ್ತೆಹಚ್ಚಲು ಅಧಿಕಾರಿಗಳು ಶೋಧ ಮುಂದುವರಿಸಿದ್ದಾರೆ.

ಶಿವಮೊಗ್ಗದ ವಿಜಯನಗರ ಹಾಗೂ ಗೋಪಾಲಗೌಡ ಬಡಾವಣೆಯಲ್ಲಿರುವ ಅವರ ನಿವಾಸಗಳ ಮೇಲೆ ಅಧಿಕಾರಿಗಳ ತಂಡ ದಾಳಿ ಮಾಡಿದೆ.ಸಾಗರ ಆನಂದಪುರ ಸಮೀಪದ ತಳಲೆ ಗ್ರಾಮದಲ್ಲಿರುವ ಅರ್ಜುನ ಅವರಿಗೆ ಸೇರಿದ 2.5 ಎಕರೆ ಮತ್ತು 4.5 ಎಕರೆ ವಿಸ್ತೀರ್ಣದ ಬೃಹತ್ ಫಾರ್ಮ್ ಹೌಸ್‌ಗಳ ಮೇಲೂ ಅಧಿಕಾರಿಗಳು ದಾಳಿ ಇಟ್ಟಿದ್ದಾರೆ. ಲೋಕಾಯುಕ್ತ ಡಿವೈಎಸ್ಪಿ ಚಂದ್ರಶೇಖರ್, ಇನ್ಸೆಕ್ಟರ್‌ಗಳಾದ ಪ್ರಭು ಸೂರೇನ್ ಮತ್ತು ಗುರುರಾಜ್ ಮೈಲಾರಿ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಯುತ್ತಿದ್ದು, ಮಹತ್ವದ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ.

ಸರ್ವೆ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಸೋಮಲಿಂಗಪ್ಪ ಸಿದ್ದನಗೌಡರ್ ಅವರ ನಿವಾಸಗಳ ಮೇಲೆ ದಾಳಿ ನಡೆದಿದೆ.ಧಾರವಾಡದ ಮುರಗೋಡ್ ನಿವಾಸ, ಭಾರತಿ ನಗರದ ನಿವಾಸ ಹಾಗೂ ಎಡಿಎಲ್‌ಆರ್ ಕಚೇರಿಯಲ್ಲಿ ಲೋಕಾಯುಕ್ತ ಪೊಲೀಸರು ತಪಾಸಣೆ ನಡೆಸುತ್ತಿದ್ದಾರೆ. ಲೋಕಾಯುಕ್ತ ಎಸ್ಪಿ ಸಿದ್ದಲಿಂಗಪ್ಪ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಯುತ್ತಿದ್ದು, ಆಸ್ತಿ ವಿವರಗಳ ಕುರಿತು ಮಾಹಿತಿ ಕಲೆಹಾಕಲಾಗುತ್ತಿದೆ.

**ಬಲೆಗೆ ಬಿದ್ದವರು–***ಹೆಚ್ ಎಂ ಜನಾರ್ದನ್ ಸೂಪರಟೆಂಡೆಂಟ್ ಇಂಜಿನಿಯರ್ ಕೆಆರ್ ಇಐಎಸ್ ಬೆಂಗಳೂರು ಗ್ರಾಮಾಂತರ

*ಪುರುಷೋತ್ತಮ ದಾಸ್ ಹೆಗಡೆ ಮುಖ್ಯ ಇಂಜಿನಿಯರ್ ಲೋಕೋಪಯೋಗಿ ಬೆಂಗಳೂರು

*ಅರ್ಜುನ ಆರ್.ಹೆಚ್ ಎಇಇ ಬೆಸ್ಕಾಂ ದಾವಣಗೆರೆ

*ಸೋಮಲಿಂಗಪ್ಪ ಸರ್ವೇಯರ್ ಧಾರವಾಡ

## ನೀಲಹಳ್ಳಿ ಬೆಂಕಿ ಪ್ರಕರಣಕ್ಕೆ ತೀರ್ಪು: 11 ಆರೋಪಿಗಳಿಗೆ ತಲಾ 3 ವರ್ಷ ಶಿಕ್ಷೆ

**ಯಾದಗಿರಿ:ಫೆ.12:**ತಾಲೂಕಿನ ಸೈದಾಪೂರ ಪೊಲೀಸ್ ಠಾಣೆ ವ್ಯಾಪ್ತಿಯ ನೀಲಹಳ್ಳಿ ಗ್ರಾಮದಲ್ಲಿ 2014ರಲ್ಲಿ ನಡೆದಿದ್ದ ಬೆಂಕಿ ಹಚ್ಚುವ ಅಪರಾಧ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾದಗಿರಿ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಹತ್ವದ ತೀರ್ಪು ಪ್ರಕಟಿಸಿದೆ. ಪ್ರಕರಣದಲ್ಲಿ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ 11 ಮಂದಿಗೆ ತಲಾ 3 ವರ್ಷಗಳ ಸರಳ ಕಾರಾಗೃಹ ಶಿಕ್ಷೆ ಹಾಗೂ ಒಟ್ಟು ರೂ.77 ಸಾವಿರ ದಂಡ ವಿಧಿಸಲಾಗಿದೆ.

ಪ್ರಕರಣದ ವಸ್ತುನಿಷ್ಠ ಹಿನ್ನಲೆ ಪ್ರಕಾರ, 2014ರ ಮಾರ್ಚ್ 18ರಂದು ದೇವಸ್ಥಾನಕ್ಕೆ ಸೇರಿದೆ ಎನ್ನಲಾದ ಜಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹೊಟೇಲ್ ಮತ್ತು ಕಿರಾಣಿ ಅಂಗಡಿಗೆ ಆರೋಪಿಗಳು ಸಂಚು ರೂಪಿಸಿ ಪೆಟ್ರೋಲ್ ಚೆಲ್ಲಿ ಬೆಂಕಿ ಹಚ್ಚಿದ್ದರು. ಈ ಕೃತ್ಯದಿಂದ ಸುಮಾರು ರೂ.1.20 ಲಕ್ಷ ಮೌಲ್ಯದ ಆಸ್ತಿ ಹಾನಿಗೊಳಗಾಗಿದ್ದು, ಸಾರ್ವಜನಿಕ ಶಾಂತಿ ಭದ್ರತೆಗೆ ಧಕ್ಕೆಯುಂಟಾಗಿತ್ತು. ಈ ಕುರಿತು ಸೈದಾಪೂರ ಠಾಣೆಯಲ್ಲಿ ಅಪರಾಧ ಪ್ರಕರಣ ದಾಖಲಾಗಿತ್ತು.ವಿಚಾರಣೆಯ ಸಂದರ್ಭದಲ್ಲಿ ಅಭಿಯೋಜಕ ಪಕ್ಷವು ಸಾಕ್ಷಿದಾರರ ಹೇಳಿಕೆಗಳು, ದಾಖಲೆ ಸಾಕ್ಷ್ಯಗಳು ಹಾಗೂ ತನಿಖಾ ಅಧಿಕಾರಿಗಳ ವರದಿಗಳನ್ನು ನ್ಯಾಯಾಲಯದ ಮುಂದೆ ಮಂಡಿಸಿತು. ಪರಿಗಣಿಸಿದ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಆರೋಪಿಗಳ ಅಪರಾಧ ಕೃತ್ಯ ಸಾಬೀತಾಗಿದೆ ಎಂದು ನ್ಯಾಯಾಲಯ ತೀರ್ಮಾನಿಸಿದೆ.

ಈ ಪ್ರಕರಣದಲ್ಲಿ ಶಿಕ್ಷೆಗೆ ಗುರಿಯಾದವರು  ಶಂಕ್ರೆಪ್ಪಗೌಡ, ಶಾಂತುರೆಡ್ಡಿ ಪೊಲೀಸ್ ಪಾಟೀಲ್, ಬಸನಗೌಡ ಗಿರಿಯಪ್ಪನೋರು, ಚೆನ್ನರೆಡ್ಡಿ, ರೆಡ್ಡಪ್ಪ, ಬನ್ನಪ್ಪ, ಹಣಮಂತ, ಹುಸೇನಪ್ಪ, ಮಲ್ಲಪ್ಪ, ಮಾರಾಯ ಮತ್ತು ಭೀಮಣ್ಣ  ಇವರೆಲ್ಲರೂ ನೀಲಹಳ್ಳಿ ಗ್ರಾಮದ ನಿವಾಸಿಗಳಾಗಿದ್ದಾರೆ.ನ್ಯಾಯಾಲಯವು ಭಾರತೀಯ ದಂಡ ಸಂಹಿತೆ (ಐಕಅ)ಯ ಕಲಂ 143 (ಅನಧಿಕೃತ ಗುಂಪುಗೂಡಿಕೆ), 147 (ದಂಗಾ), 341 (ಅಕ್ರಮವಾಗಿ ತಡೆಹಿಡಿಯುವುದು), 436 (ಬೆಂಕಿ ಹಚ್ಚಿ ಆಸ್ತಿ ನಾಶಪಡಿಸುವುದು) ಜೊತೆಗೆ 149 (ಸಾಮೂಹಿಕ ಅಪರಾಧ ಹೊಣೆ) ಅಡಿಯಲ್ಲಿ ಅಪರಾಧ ಸಾಬೀತಾಗಿದೆ ಎಂದು ಹೇಳಿ ಶಿಕ್ಷೆ ವಿಧಿಸಿದೆ. ಸರ್ಕಾರದ ಪರವಾಗಿ ಪ್ರಧಾನ ಸರ್ಕಾರಿ ಅಭಿಯೋಜಕರಾದ ಗುರುಲಿಂಗಪ್ಪ ಶ್ರೀಮಂತ ತೇಲಿ ಅವರು ಸಮಗ್ರ ವಾದ ಮಂಡಿಸಿ ಆರೋಪ ಸಾಬೀತಾಗುವಂತೆ ನ್ಯಾಯಾಲಯಕ್ಕೆ ನೆರವಾದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE